ಬೆಂಗಳೂರು, ಕೋಲಾರ, ಹಾಸನ, ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಬಳ್ಳಾರಿ, ರಾಯಚೂರು, ವಿಜಯಪುರ, ಕಲಬುರ್ಗಿ

ದಶಕದ ನಡಿಗೆ... RNI No: KARKAN/2014/54928 ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI Postal Registration N.o KA/BGW--1862/2024-26 KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ: 11 Vol:11
ಸಂಚಿಕೆ: 137 Issuse:137
ದಿನಾಂಕ:03-07-2024 Date:03-07-2024
ಬುಧವಾರ Wednesday
ಪುಟ:4 Page:4
ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ಎನ್‌ಡಿಎ ಸಂಸದರಿಗೆ ಮೋದಿ ಪಾಠ

## ವಿಪಕ್ಷ ನಾಯಕ ರಾಹುಲ್‌ಗೂ ಪ್ರಧಾನಿ ಪರೋಕ್ಷ ಬುದ್ಧಿವಾದ

ನವದೆಹಲಿ:–

ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ವಿರುದ್ಧ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ತೀವ್ರ ವಾಗ್ದಾಳಿ ನಡೆಸಿ ಆಡಳಿತ ಮತ್ತು ಪ್ರತಿ ಪಕ್ಷಗಳ ಸದಸ್ಯರ ನಡುವೆ ಕೋಲಾಹಲ ಉಂಟಾದ ಹಿನ್ನೆಲೆಯಲ್ಲಿ "ಸದನದಲ್ಲಿ ನಿಯಮಗಳನ್ನು ಅನುಸರಿಸಿ" ಮತ್ತು ಸದನದಲ್ಲಿ ನಡವಳಿಕೆ ಖಚಿತಪಡಿಸಿಕೊಳ್ಳಿ" ಎನ್ನುವ ಮಂತ್ರವನ್ನು ಎನ್‌ಡಿಎ ಸಂಸದರಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಸಲಹೆ ನೀಡಿದ್ದಾರೆ.

ಎಲ್ಲಾ ಸಂಸದರು ರಾಷ್ಟ್ರ ಸೇವೆಗಾಗಿ ಸಂಸತ್ತಿಗೆ ಬಂದಿದ್ದಾರೆ ಮತ್ತು ಎನ್‌ಡಿಎ ಸಂಸದರು ಇದಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಸದನದಲ್ಲಿ ನಾವು ಹೇಗೆ ನಡೆದುಕೊಳ್ಳಬೇಕು ಎನ್ನುವುದನ್ನು ತಿಳಿದುಕೊಳ್ಳಬೇಕು ಎಂದು ಎನ್ ಡಿಎ ಮೈತ್ರಿಕೂಟದ ಸಂಸದರಿಗೆ



ಕಿವಿಮಾತು ಹೇಳಿದರು.

ಬಿಜೆಪಿಯ ಉನ್ನತ ನಾಯಕರು ಮತ್ತು ಸಚಿವರು ಭಾಗವಹಿಸಿದ್ದ ಎನ್‌ಡಿಎ ಸಂಸದೀಯ ಪಕ್ಷದ ಸಭೆ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು ಸಂಸದರು ತಮ್ಮ ಕ್ಷೇತ್ರ ಮತ್ತು ರಾಷ್ಟ್ರೀಯ ಮಹತ್ವದ ಸಮಸ್ಯೆಗಳನ್ನು ಪ್ರಸ್ತಾಪಿಸುವಾಗ ನಿಯಮಗಳನ್ನು ಅನುಸರಿಸಿ, ಪ್ರಧಾನಿ ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆ ಕಾಪಾಡಿಕೊಳ್ಳಲು ಮತ್ತು ನಡವಳಿಕೆಯನ್ನು ಖಾತ್ರಿಪಡಿಸಿಕೊಳ್ಳಿ ಎಂದು ಸಲಹೆ ನೀಡಿದ್ದಾರೆ.

ಸತತ ಮೂರನೇ ಅವಧಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಎನ್‌ಡಿಎ ಸಂಸದರನ್ನು ಉದ್ದೇಶಿಸಿ ಅವರು ಮಾಡಿದ ಮೊದಲ ಭಾಷಣ ಇದಾಗಿದೆ.

ಸಭೆಯ ಬಳಿಕ ಮಾಹಿತಿ ನೀಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಎನ್‌ಡಿಎ ಸಂಸದರು ಪ್ರಧಾನ ಮಂತ್ರಿಯ ಮೂರನೇ ಅವಧಿಗೆ ಅಭಿನಂದನೆ ಸಲ್ಲಿಸಿದರು ಜೊತೆ ನಿರಂತರ ಬೆಂಬಲ ನೀಡುವ ಭರವಸೆ ನೀಡಿದ್ದಾರೆ ಎಂದರು.

'ಪ್ರಧಾನಿ ಮೋದಿ ನಾಯಕತ್ವದಲ್ಲಿ ಮೈತ್ರಿ ಒಗ್ಗೂಡಿದೆ' ವಿಶೇಷವಾಗಿ ಅವರು ಪ್ರತಿಯೊಂದು ಅವಧಿಗೂ ಮುನ್ನ ಅವರ ನಾಯಕರಾಗಿ ಆಯ್ಕೆಯಾದಾಗ, ಸಂಸತ್ತಿನ ಅಧಿವೇಶನಗಳಲ್ಲಿ ಎನ್‌ಡಿಎ ಸಂಸದರ ಸಭೆಗಳನ್ನು ಉದ್ದೇಶಿಸಿ ಮಾತನಾಡುವುದು ಅವರಿಗೆ ಹೆಚ್ಚು ವಾಡಿಕೆಯಾಗಿದೆ ಎಂದರು.

ಸಭೆಯಲ್ಲಿ, ಪ್ರತಿಯೊಬ್ಬ ಸಂಸದರು ತಮ್ಮ ಕುಟುಂಬದೊಂದಿಗೆ 'ಪಿಎಂ ಸಂಗ್ರಹಾಲಯ'ಕ್ಕೆ ಭೇಟಿ ನೀಡಬೇಕು ಎಂದು ಪ್ರಧಾನಿ ಸಲಹೆ ನೀಡಿದ್ದಾರೆ. "ಸಂಸದರು ತಮ್ಮ ಕ್ಷೇತ್ರದ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ಮಂಡಿಸುವ ರೀತಿಯಲ್ಲಿ ನಡೆಯಬೇಕು. ಆಸಕ್ತಿಯಿರುವ ಮತ್ತು ಸಂಸತ್ತಿನಲ್ಲಿ ಕೈಗೆತ್ತಿಕೊಳ್ಳಬಹುದಾದ ವಿಷಯಗಳಲ್ಲಿ ಪರಿಣತಿ ಬೆಳೆಸಿಕೊಳ್ಳಿ. ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅನುಸರಿಸಿ" ಎಂದು ಸಲಹೆ ನೀಡಿದ್ದಾರೆ.

### ಮಿತ್ರ ಪಕ್ಷಗಳ ಪಾತ್ರ ಹಿರಿದು

ಈ ಭಾರಿಯ ಎನ್‌ಡಿಎ ಸರ್ಕಾರದಲ್ಲಿ ಮಿತ್ರಪಕ್ಷಗಳ ಪಾತ್ರ ಮಹತ್ವದ್ದು ಎನ್ನುವುದನ್ನು ಮನವರಿಕೆ ಮಾಡಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲರನ್ನು ಜೊತೆಯಾಗಿ ಕೊಂಡೊಯ್ಯಲು ಮುಂದಾಗಿದ್ದಾರೆ. 2014 ರಿಂದ ಮೊದಲ ಬಾರಿಗೆ ಬಿಜೆಪಿಯು ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಲೋಕಸಭೆಯಲ್ಲಿ ಬಹುಮತವನ್ನು ಕಳೆದುಕೊಂಡಿರುವುದರಿಂದ ಮತ್ತು ಸರ್ಕಾರದ ಮುಂದುವರಿಕೆಗಾಗಿ ಮಿತ್ರಪಕ್ಷಗಳ ಮೇಲೆ ಅವಲಂಬಿತವಾಗಿರುವುದರಿಂದ ಎನ್ ಡಿಎ ಸಭೆ ಮಹತ್ವ ಪಡೆದುಕೊಂಡಿದೆ.

## ಬಾಮೈದನಿಂದ ಪತ್ನಿಗೆ ಜಮೀನಿನ ಉಡುಗೊರೆ: ಸಿಎಂ

ಬೆಂಗಳೂರು:–



ಬಾಮೈದನ ಜಮೀನನ್ನು ಅರಿಶಿನ –ಕುಂಕುಮ ರೀತಿಯಲ್ಲಿ ತಮ್ಮ ಪತ್ನಿಗೆ ಉಡುಗೊರೆ–ಯಾಗಿ ನೀಡಿದ್ದಾನೆ ಎಂದು ಹೇಳುವ ಮೂಲಕತಮ್ಮ ವಿರುದ್ಧ ಮುಡಾ ಅಕ್ರಮ ಆರೋಪವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾರಸಗಟಾಗಿ ತಳ್ಳಿ ಹಾಕಿದ್ದಾರೆ.

ಇದು ಬಿಜೆಪಿಯವರ ಕಾಲದಲ್ಲಿ ಆಗಿದ್ದು 1ಎಕರೆ 15 ಗುಂಟೆ ಜಮೀನು ತಮ್ಮ ಪತ್ನಿ ಹೆಸರಿನಲ್ಲಿದೆ. ತಾವು ಅಧಿಕಾರದಲ್ಲಿದ್ದಾಗ ಜಮೀನು ಖರೀದಿಸಿಲ್ಲ ಎಂದು ಬೆಂಗಳೂರಿನಲ್ಲಿಂದು ಸುದ್ದಿಗಾರರಿಗೆ ತಿಳಿಸಿದರು.

ಕಾನೂನಿನ ಪ್ರಕಾರ 50:50 ಜಮೀನು ಅನುಪಾತದಲ್ಲಿ ಜಮೀನು ನೀಡುವುದಾಗಿ ಮೂಡಾ ಹೇಳಿದೆ. ಆದ–ರೆ ಮೂಡಾದವರು ಜಮೀನನ್ನು ನಿವೇಶನ ಮಾಡಿ ಮುಚ್ಚಿದ್ದಾರೆ. ಈ ರೀತಿ ಹಂಚಿದ ಮೇಲೆ ನಮಗೆ ಜಮೀನು ಇಲ್ಲದಂತಾಯಿತು.

ಈ ಹಿನ್ನೆಲೆಯಲ್ಲಿ ಮೂಡಾದವರು 50:50 ಅನುಪಾತದಲ್ಲಿ ಜಮೀನು ಕೊಡುತ್ತೇವೆ ಎಂದು ಹೇಳಿದರು. ಅದಕ್ಕೆ ಬೇರೆ ಕಡೆ ಜಮೀನು ಕೊಟ್ಟರೆ ಕಾನೂನಿನ ಪ್ರಕಾರವೇ ಜಮೀನು ಹಂಚಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

## ಮಲ್ಯ ವಿರುದ್ಧ ಜಾಮೀನು ರಹಿತ ವಾರೆಂಟ್



ನವದೆಹಲಿ:–

ಪರಾರಿಯಾಗಿರುವ ಉದ್ಯಮಿ ವಿಜಯ್ ಮಲ್ಯ ವಿರುದ್ಧ ಮುಂಬೈನ ವಿಶೇಷ ನ್ಯಾಯಾಲಯ ಜಾಮೀನು ರಹಿತ ವಾರೆಂಟ್ ಜಾರಿ ಮಾಡಿದೆ.

ಈ ಜಾಮೀನು ರಹಿತ ವಾರಂಟ್ ವಿಜಯ್ ಮಲ್ಯ ವಿರುದ್ಧ ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ಗೆ ಸಂಬಂಧಿಸಿದ ರೂ.180 ಕೋಟಿ ಸಾಲವನ್ನು ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿದೆ.

ನ್ಯಾಯಾಲಯ ಜೂನ್ 29 ರಂದು ಮಲ್ಯ ವಿರುದ್ಧ ಜಾಮೀನು ರಹಿತ ವಾರೆಂಟ್ ಹೊರಡಿಸಿದೆ. ಆದ–ರೆ ಅದರ ಆದೇಶ ಸೋಮವಾರ ಲಭ್ಯವಾಗಿದೆ. ಸಿಬಿಐ ವಾದವನ್ನು ಆಲಿಸಿದ ನ್ಯಾಯಾಲಯ, ವಿಜಯ್ ಮಲ್ಯ ಅವರ ತಲೆಮರೆಸಿಕೊಂಡಿರುವ ವಿಷಯ ಆಧರಿಸಿ, ಮಲ್ಯ ವಿರುದ್ಧ ಜಾಮೀನು ರಹಿತ –3ನೇ ಪುಟಕ್ಕೆ

## ಮುಡಾದಲ್ಲಿ 4000 ಕೋಟಿ ಗುಳುಂ



ಬೆಂಗಳೂರು:–

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ 4 ಸಾವಿರ ಕೋಟಿ ಗುಳುಂ ಮಾಡಿದ್ದಾರೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸಿದ್ದರಾಮಯ್ಯ ಅವರ ವಿರುದ್ಧ ವಾಗ್ದಾಳಿ ನಡೆಸಿ ಅವರು ವಾಲ್ಮೀಕಿ ನಿಗಮದಲ್ಲಿ 187 ಕೋಟಿ ದಲಿತರ ಹಣವನ್ನು ಗುಳುಂ ಮಾಡಿರುವ 'ಸಿದ್ದ" ಹಸ್ತರು ಈಗ ಮೈಸೂರಿನ ಮುಡಾದಲ್ಲಿ 4 ಸಾವಿರ ಕೋಟಿ ರೂ. ಗುಳುಂ ಮಾಡುವ ಮೂಲಕ ಮತ್ತೊಮ್ಮೆ ತಮ್ಮ ಕೈಚಳಕ ಪ್ರದರ್ಶಿಸಿದ್ದಾರೆ ಎಂದು ಟೀಕಿಸಿದ್ದಾರೆ.

ಗೋಲಾಮಾಲ್ ಸಿದ್ದರಾಮಯ್ಯನವರೇ ಈ ಪ್ರಶ್ನೆಗಳಿಗೆ ಉತ್ತರವಿದೆಯೇ ತಮ್ಮ ಧರ್ಮ ಪತ್ನಿಯ ಹೆಸರಿನಲ್ಲೂ ನಿಯಮಬಾಹಿರವಾಗಿ ನಿವೇಶನ ವರ್ಗಾವಣೆಯಾಗಿರುವ ಸುದ್ದಿಯು ಹೊರಗೆ ಬಂದಿರುವ –3ನೇ ಪುಟಕ್ಕೆ

## ಶಾಸಕರ ಅಭಿಪ್ರಾಯ ಸಂಗ್ರಹಿಸಿ ಸಿದ್ದು ಆಯ್ಕೆ



ಮಂಡ್ಯ:–

ಶಾಸಕರ ಅಭಿಪ್ರಾಯ ಸಂಗ್ರಹಿಸಿ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರನ್ನು ಆಯ್ಕೆ ಮಾಡಲಾಗಿದೆ. ಸಿದ್ದರಾಮಯ್ಯ ಅವರನ್ನು ನೇರವಾಗಿ ಪಕ್ಷ ಆಯ್ಕೆ ಮಾಡಿಲ್ಲ ಎಂದು ಮಳವಳ್ಳಿ ಶಾಸಕ ನರೇಂದ್ರ ಸ್ವಾಮಿ ತಿಳಿಸಿದರು.

ಮಳವಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಈಗಲೂ ಕಾಂಗ್ರೆಸ್ ಪಕ್ಷದಲ್ಲಿ ಶಾಸಕರ ಬಹುಮತದ ಅಭಿಪ್ರಾಯಕ್ಕೆ ಬದ್ಧವಾಗಿದ್ದು, 2013ರಲ್ಲೂ ಮತದಾನದ ಮೂಲಕವೇ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಲಾಗಿತ್ತು. ಇದು ಕಾಂಗ್ರೆಸ್ ಪಕ್ಷದ ಆಂತರಿಕ ಪ್ರಜಾಪ್ರಭುತ್ವ. ಈಗಲೂ ಆತಂ–ರಿಕ ಪ್ರಜಾಪ್ರಭುತ್ವಕ್ಕೆ ಪಕ್ಷ ಬದ್ಧವಾಗಿದೆ –3ನೇ ಪುಟಕ್ಕೆ

## ಇವಿಎಂ ಮೇಲೆ ನಂಬಿಕೆಯಿಲ್ಲ



ನವದೆಹಲಿ:–

ಉತ್ತರ ಪ್ರದೇಶದಲ್ಲಿ 80 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದರೂ ವಿದ್ಯುನ್ಮಾನ ಮತ ಯಂತ್ರಗಳ ಮೇಲೆ ನಂಬಿಕೆ ಬರುವುದಿಲ್ಲ ಎಂದು ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್ ಹೇಳಿದರು.

ಲೋಕಸಭೆಯಲ್ಲಿಂದು ರಾಷ್ಟ್ರಪತಿಗಳ ಭಾಷಣದ ಮೇಲೆ ಮಾತನಾಡಿದ ಅವರು ವಿವಿಎಂಗಳ ಬಗ್ಗೆ ಇಂದು ಭರವಸೆ ಇಲ್ಲ ಎಂದರು.

ವಿವಿಎಂ ವಿರುದ್ಧ ಸಾಮಾಜವಾದಿ ಪಕ್ಷ ನಿರಂತರ ಹೋರಾಟ ಮಾಡುತ್ತಲೇ ಇರುತ್ತದೆ. ವಿವಿಎಂ ಮೂಲಕವೇ ಗೆದ್ದು ವಿವಿಎಂ ರದ್ದು ಮಾಡುತ್ತೇವೆ ಎಂದು ಹೇಳಿದಾಗ ಸದನದಲ್ಲಿ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಡಿಎಂಕೆ ಸದಸ್ಯ ದಯಾನಿಧಿ ಮಾರನ್ ಸೇರಿದಂತೆ ಇತರ ಸದಸ್ಯರು ಮೇಜು ಕುಟ್ಟಿ ಬೆಂಬಲ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರದಿಂದ ಉತ್ತರ ಪ್ರದೇಶ ಅನ್ಯಾಯವಾಗಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ –3ನೇ ಪುಟಕ್ಕೆ

## ಡೆಂಗ್ಯೂಗೆ ಮತ್ತೊಂದು ಬಲಿ

ಬೆಂಗಳೂರು:–

ಜಿಟಿ ಮಳೆ ಹಿನ್ನೆಲೆ ಬೆಂಗಳೂರಿನ ಬಹುತೇಕ ಪ್ರದೇಶಗಳಲ್ಲಿ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಗಣನೀಯ ಏರಿಕೆ ಕಂಡಿದ್ದು, ಇದರ ನಡುವೆ 27 ವರ್ಷದ ಯುವಕ ಸಾವಿಗೀಡಾಗಿರುವುದು ಆತಂಕ ದುಪ್ಪಟ್ಟು ಮಾಡಿದೆ.



ಕಗ್ಗದಾಸಪುರದ ಯುವಕ ಸೋಂಕಿಗೆ ತುತ್ತಾಗಿ ಪ್ರಾಣ ಕಳೆದುಕೊಂಡಿದ್ದು, ಇದರೊಂದಿಗೆ ಸಾವಿನ ಸಂ–ಖ್ಯೆ 3ಕ್ಕೆ ಏರಿಕೆಯಾಗಿದೆ. ಜೂ.27ರಂದು ಬೆಂಗಳೂರಿನಲ್ಲಿ ಡೆಂಗ್ಯೂನಿಂದ ತಮಿಳುನಾಡಿನ ವೃದ್ಧೆ ಸೇರಿ ಇಬ್ಬರು ಸಾವನ್ನಪ್ಪಿದ್ದರು. ಈ ಎರಡೂ ಪ್ರಕರಣಗಳು ಬಿಬಿಎಂಪಿ ಪೂರ್ವ ವಲಯದಲ್ಲಿ ದಾಖಲಾಗಿವೆ.


ಜ್ವರದಿಂದ ಬಳಲುತ್ತಿದ್ದ ಸಿ.ವಿ.ರಾಮನ್ ನಗರದ ನಿವಾಸಿ, 27 ವರ್ಷದ ಅಭಿಲಾಷ್?? ಜೂ.25ರಂದು ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ವೈದ್ಯಕೀಯ ಪರೀಕ್ಷೆಯಲ್ಲಿ ಡೆಂಗ್ಯೂ ದೃಢಪಟ್ಟಿತ್ತು. ಚಿಕಿತ್ಸೆ ಫಲಿಸದೇ ಜೂ.27ರಂದು ಮೃತಪಟ್ಟಿದ್ದರು. ಮತ್ತೊಂದು ಪ್ರಕರಣದಲ್ಲಿ 80 ವರ್ಷದ ವೃದ್ಧೆ ನೀರಜಾದೇವಿಮೃತಪಟ್ಟಿದ್ದಾರೆ.

ಪ್ರಸಕ್ತ ವರ್ಷದಲ್ಲಿ ಡೆಂಗ್ಯೂ ಸಂಬಂಧಿತ ಇಬ್ಬರ ಸಾವು ಪ್ರಕರಣಗಳು ದಾಖಲಾಗಿವೆ. ಕಳೆದ ವರ್ಷ 9 ಜನ ಸಾವನ್ನಪ್ಪಿದ್ದರು ಎಂದು ಬಿಬಿಎಂಪಿ ಆರೋಗ್ಯ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ.

ಇನ್ನೂ, ನಾಲ್ಕು ದಿನಗಳ ಹಿಂದೆ ಮೃತಪಟ್ಟ 80 ವರ್ಷದ ವೃದ್ದೆಯ ಸಾವಿಗೆ ಡೆಂಗ್ಯೂ ಅಲ್ಲ ಕ್ಯಾನ್ಸರ್ ಕಾರಣ ಎಂದು ಬಿಬಿಎಂಪಿ ಸರ್ಕಾರಕ್ಕೆ ಸಲ್ಲಿಸಿದ ವರದಿಯಲ್ಲಿ ತಿಳಿಸಿದೆ. ಈಗ ಹೊಸದಾಗಿ 213 ಡೆಂಗ್ಯೂ ಪ್ರಕರಣಗಳು ಪತ್ತೆಯಾಗಿದ್ದು, ಜೂನ್‌ನಲ್ಲಿ 1,742 ಜನರಲ್ಲಿ ಸೋಂಕು ದೃಢಪಟ್ಟಿದೆ.

## ನಟ ಸಲ್ಮಾನ್ ಹತ್ಯೆಗೆ ಸಂಚು

ಮುಂಬೈ:–



ಬಾಲಿವುಡ್ ನಟ ಸಲ್ಮಾನ್ ಖಾನ್ ಹತ್ಯೆಗೆ ಸಂಚು ರೂಪಿಸಲಾಗಿತ್ತು. ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ. ಕಳೆದ 8 ತಿಂಗಳ ಹಿಂದೆ ಹತ್ಯೆಗೆ ಸಂಚು ನಡೆಯುತ್ತಿತ್ತು. ಈ ಬಗ್ಗೆ ಪೊಲೀಸರು ನಿಗಾವಹಿಸಿದ್ದರು. ಇದರ ಬೆನ್ನಲ್ಲೇ ಈ ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ.

ನಟ ಸಲ್ಮಾನ್ ಖಾನ್ ಅವರ ಚಲನವಲನಗಳ ಬಗ್ಗೆ ಬಿಷ್ಣೋಯ್ ಗ್ಯಾಂಗ್ ಕಣ್ಣೇಟ್ಟಿತ್ತು. ಸಲ್ಮಾನ್ ಖಾನ್ ಭಾಂದ್ರಾದಲ್ಲಿರುವ ಮನೆ ಫನ್ವೇಲ್ ಫಾಮ್ ಹೌಸ್ ಫಿಂ ಸಿಟಿಯ ಅವರ ಚಟುವಟಿಕೆಯ ವಿವರಗಳನ್ನು ಸಂಗ್ರಹಿಸಿದ್ದರು.

ಸಲ್ಮಾನ್ ಹತ್ಯೆಗೆ ಎಕೆ 47 ಎಂ 16 ಮತ್ತು ಎಕೆ –92 ಬಂದೂಕುಗಳನ್ನು ಬಳಸಿ ನೆರೆಯ ಪಾಕಿಸ್ತಾನದಿಂದ ಬಿಷ್ಣೋಯ್ ಗ್ಯಾಂಗ್ ತಂದಿದ್ದ ಅಲ್ಲದೆ ಸಲ್ಮಾನ್ ಖಾನ್ ಹತ್ಯೆಗೆ ಶೂಟರ್ ಗಳಿಗೆ 25 ಲಕ್ಷ ರೂಪಾಯಿಗಳ ಗುತ್ತಿಗೆ ನೀಡಲಾಯಿತು. –3ನೇ ಪುಟಕ್ಕೆ

## ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಆಯ್ಕೆ ಸಮಿತಿ ರಚನೆ: ಪ್ರಶಸ್ತಿಗೆ ನಾಮ ನಿರ್ದೇಶನಗಳ ಆಹ್ವಾನ

ಬೆಳಗಾವಿ:–

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ 2019ನೇ ಕ್ಯಾಲೆಂಡರ್ ವರ್ಷದಿಂದ 2023ನೇ ಕ್ಯಾಲೆಂಡರ್ ವರ್ಷಗಳಿಗೆ ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ ಹಾಗೂ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಆಯ್ಕೆ ಸಮಿತಿ ರಚಿಸಲಾಗಿದ್ದು,ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

**ಆಯ್ಕೆ ಸಮಿತಿ**

ಹೈಕೋರ್ಟ್ ನಿವೃತ್ತ ನ್ಯಾಯಾಧೀಶರಾದ ಪಿ. ಎನ್. ದೇಸಾಯಿ ಅವರ ಅಧ್ಯಕ್ಷತೆಯ ಆಯ್ಕೆ ಸಮಿ ತಿಯಲ್ಲಿ ಹಿರಿಯ ಪತ್ರಕರ್ತರಾದ ಡಾ.ಈಶ್ವರ ದೈತೋಟ, ಶಾಂತಲಾ ಧರ್ಮರಾಜ್ ಹಾಗೂ ಎಂ.ಎಸ್.ಮಣಿ ಸದಸ್ಯರಾಗಿದ್ದಾರೆ.ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಸದಸ್ಯ ಕಾರ್ಯ ದರ್ಶಿಗಳಾಗಿರುತ್ತಾರೆ.

**ಟಿಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ–**

ಕನ್ನಡದ ಹಿರಿಯ ಪರ್ತಕರ್ತ ಟಿ.ಎಸ್. ರಾಮಚಂದ್ರರಾವ್ ಅವರ ನೆನಪಿನಲ್ಲಿ ಸರ್ಕಾರ ಟಿಯೆಸ್ಸಾರ್ ನಿಡುತ್ತಾ ಬಂದಿದೆ. ಪ್ರಶಸ್ತಿಯ ಮೊತ್ತ 2 ಲಕ್ಷ ರೂ ಆಗಿದ್ದು, ಕನ್ನಡ ಪತ್ರಿಕೋದ್ಯಮ, ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಎರಡರಲ್ಲೂ ಒಟ್ಟಿಗೆ ಕನಿಷ್ಠ 30 ವರ್ಷಗಳ ಸೇವೆ ಸಲ್ಲಿಸಿರಬೇಕು. ಜೊತೆಗೆ ಕನ್ನಡ ಕ್ಷೇತ್ರಕ್ಕೆ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರುವವರನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರತಿ ಕ್ಯಾಲೆಂಡರ್ ವರ್ಷಕ್ಕೆ ಒಬ್ಬರಿಗೆ ಮಾತ್ರ ಈ ಪ್ರಶಸ್ತಿಯನ್ನು ನೀಡಲಾಗುವುದು.

**ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ–**

ಪತ್ರಿಕಾ ರಂಗದ ಭೀಷ್ಮರೆಂದೇ ಹೆಸರಾದ ಮೊಹರೆ ಹಣಮಂತರಾಯ ಅವರ ನೆನಪಿನಲ್ಲಿ ಸರ್ಕಾರವು ಪ್ರಶಸ್ತಿ ನೀಡುತ್ತಾ ಬಂದಿದೆ. ಪ್ರಶಸ್ತಿಯ ಮೊತ್ತವು 2 ಲಕ್ಷ ರೂ ಆಗಿದ್ದು, ಕನ್ನಡದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಯಾವುದೇ ಪತ್ರಿಕೆಯನ್ನು ಅಥವಾ ಪತ್ರಿಕಾ ಸಮೂಹವನ್ನು ಸಮರ್ಥವಾಗಿ ಕಟ್ಟಿ ಬೆಳೆಸಿದ ಹಾಗೂ ಪ್ರವೃತ್ತಿಯಲ್ಲಿ ಪತ್ರಕರ್ತರಾಗಿ, ವೃತ್ತಿಯಲ್ಲಿ ಪತ್ರಿಕಾಲಯದ ಮಾಲೀಕರು, ಆಡಳಿತಗಾರರಾಗಿ ಕನಿಷ್ಠ 30 ವರ್ಷ ಸೇವೆ ಸಲ್ಲಿಸಿರಬೇಕು. ಪ್ರಶಸ್ತಿ ಗಳಿಗೆ ನಾಮನಿರ್ದೇಶನಗಳನ್ನು, ಮಾಧ್ಯಮ ಸಂಸ್ಥೆಗಳು ಹಾಗೂ ಇತರೆ ಸಂಘ ಸಂಸ್ಥೆಗಳು ಮತ್ತು ವ್ಯಕ್ತಿಗಳು ಪೂರ್ಣ ದಾಖಲೆಗಳೊಂದಿಗೆ ಆಯು ಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾಸೌಧ, ನಂ. 17, ಭಗವಾನ್ ಮಹಾವೀರರಸ್ತೆ, ಬೆಂಗಳೂರು 560 001 ಇಲ್ಲಿಗೆ 2024ನೇ ಜುಲೈ 25ರ ಸಂಜೆ 5.30 ಗಂಟೆ ಒಳಗಾಗಿ ಕಳುಹಿಸಿಕೊಡಬಹುದಾಗಿದೆ. ಅಥವಾ ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿ ಮೂಲಕ ಇಲ್ಲವೇ tsraward@gmail.com ಇಮೇಲ್ ವಿಳಾಸಕ್ಕೆ ಕೊನೆಯ ದಿನಾಂಕದೊಳಗೆ ಕಳುಹಿಸಿಕೊಡಬಹುದಾಗಿದೆ.

## ಡ್ರಗ್ಸ್ ದಂಧೆ: ವಿದೇಶಿಗರು ಸೇರಿ ನಾಲ್ವರ ಸೆರೆ

ಬೆಂಗಳೂರು:–

ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದ ಇಬ್ಬರು ವಿದೇಶಿ ಪ್ರಜೆಗಳ ಬಂಧಿಸಿರುವ ಸಿಸಿಬಿ ಪೊಲೀಸರು 12 ಲಕ್ಷ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿದ್ದಾರೆ.

ಖಚಿತ ಮಾಹಿತಿಯನ್ನು ಅಧರಿಸಿ ವಿದ್ಯಾರಣ್ಯಪುರದಲ್ಲಿ ಕಾರ್ಯಾಚರಣೆಯನ್ನು ನಡೆಸಿ ಡ್ರಗ್ಸ್ ಪೆಡ್ಲಿಂಗ್‌ನಲ್ಲಿ ತೊಡಗಿದ್ದ ಗಾನಾ ದೇಶದ ಸಿರಿಲ್(23) ನೈಜೀರಿಯಾ ಇಮಾನುಯಲ್(27) ಸೇರಿ ಇಬ್ಬರು ವಿದೇಶಿ ಪ್ರಜೆಗಳನ್ನು ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಬಂಧಿತ ವಿದೇಶಿ ಪ್ರಜೆಗಳಿಂದ 12 ಲಕ್ಷ ಮೌಲ್ಯದ ಎಂಡಿಎಂಎ ಕ್ರಿಸ್ಟೆಲ್, ಎಕ್ಸ್ ಟೆಸಿ ಪಿಲ್ಸ್, ಕೊಕೇನ್, ಒಂದು ದ್ವಿ–ಚಕ್ರ ವಾಹನ ಮತ್ತು ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು.

ಆರೋಪಿಗಳಿಬ್ಬರು ವಿದೇಶಿ ಪ್ರಜೆಗಳಾಗಿದ್ದು, ಬಿಜಿನೆಸ್ ಹಾಗೂ ವಿದ್ಯಾರ್ಥಿ ವೀಸಾದಡಿ ಭಾರತ ದೇಶಕ್ಕೆ ಬಂದು ನಗರದಲ್ಲಿ ವಾಸವಾಗಿ ಮೋಜಿನ ಜೀವನ ನಡೆಸಲು ಮತ್ತು ಸ್ ುಲಭ್ ವಾಗಿ –3ನೇ ಪುಟಕ್ಕೆ

## ಕೆಂಪೇಗೌಡ ಬಡಾವಣೆಗೆ ಮೂಲಸೌಕರ್ಯಕ್ಕೆ ಒತ್ತು: ಹ್ಯಾರೀಸ್

ಬೆಂಗಳೂರು:–

ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ರಸ್ತೆ ಸೇರಿದಂತೆ ಎಲ್ಲಾ ಮೂಲಸೌಕರ್ಯ ಕಲ್ಪಿಸಲು ಹೆಚ್ಚಿನ ಒತ್ತು ನೀಡಲಾಗುವುದು ಎಂದು ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರೀಸ್ ಹೇಳಿದ್ದಾರೆ.

ನಗರದಲ್ಲಿಂದು ಕೆಂಪೇಗೌಡ ಬಡಾವಣೆ ಸೇರಿದಂತೆ ಇನ್ನಿತರೆ ಬಿಡಿಎ ವ್ಯಾಪ್ತಿಯ ಪ್ ್ರದ್ ೀಶ್ ಗ್ ಳಿಗ್ ಭೇಟಿ ನೀಡಿದ –3ನೇ ಪುಟಕ್ಕೆ



# ಕೃಷಿಕರ ಮನಸ್ಸು ಅರ್ಥ ಮಾಡಿದ್ದಕ್ಕೇ ಗೆದ್ದೆ: ಗವಿಯಪ್ಪ

ಹೊಸಪೇಟೆ (ವಿಜಯನಗರ):–

‘ವಿಧಾನಸಭೆ ಚುನಾವಣೆಯಲ್ಲಿ ಎರಡು ಬಾರಿ ಸೋತ ನಂತರ ನಾನು ನನ್ನ ತೋಟದಲ್ಲಿ ಕೃಷಿ ಕಾರ್ಯದಲ್ಲಿ ತೊಡಗಿ–ಕೊಂಡೆ ಹಾಗೂ ಕೃಷಿಕರ ಮನಸ್ಸನ್ನು ಅರ್ಥ ಮಾಡಿಕೊಳ್ಳಲು ಪ್ರಯತ್ನಿಸಿದೆ. ಅದುವೇ ನನ್ನ ಗೆಲುವಿಗೆ ದಾರಿಮಾಡಿಕೊಟ್ಟಿತು’ ಎಂದು ಶಾಸಕ ಎಚ್.ಆರ್.ಗವಿಯಪ್ಪ ಹೇಳಿದರು.

ಇಲ್ಲಿನ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಭಾನುವಾರ ನಡೆದ ‘ಹಸಿರಿನೊಂದಿಗೆ ಮಾತುಕತೆ’ಯ ವಾರ್ಷಿಕೋತ್ಸವ, ಪುಸ್ತಕ ಬಿಡುಗಡೆ ಮತ್ತು ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.




‘ನಾನು ಯಾಕೆ ಸೋತೆ ಎಂಬ ಆತ್ಮಾವಲೋಕನ ನನ್ನ ತೋಟದಲ್ಲಿ ನನಗಾಯಿತು. ಕೃಷಿ ತೋಟದ ಸಾಂಗತ್ಯ ನನಗೆ ಒಂದಷ್ಟು ಮಾರ್ಗಗಳನ್ನು ತೋರಿಸಿತು. ಅದೇ ಕಾರಣದಿಂದ ರೈತರ ಕಷ್ಟಗಳ ಅರಿವೂ ಆಗಿದೆ. ಮಾಗಣೆ ರಸ್ತೆಗಳ ಸಮಸ್ಯೆ ನೀಗಿಸಿದರೆ ಕಬ್ಬು, ಇತರ ಕೃಷಿ ಉತ್ಪನ್ನಗಳ ಸಾಗಣೆ ವೆಚ್ಚ ತಗ್ಗುತ್ತದೆ, ಹೀಗಾಗಿ ಈ ರಸ್ತೆಗಳ ದುರಸ್ತಿ, ಸುಧಾರಣೆಗೆ ಹೆಚ್ಚಿನ ಗಮನ ಹರಿಸಿದ್ದೇನೆ’ ಎಂದರು.

‘ಹೊಸಪೇಟೆಗೆ ಸಕ್ಕರೆ ಕಾರ್ಖಾನೆ ಅಗತ್ಯವಿದ್ದು, ಅದರ ನಿರ್ಮಾಣಕ್ಕೆ ಸಾಧ್ಯವಿರುವ ಎಲ್ಲ ಪ್ರಯತ್ನ ಮಾಡುತ್ತಿದ್ದೇನೆ’ ಎಂದು ಶಾಸಕರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಂಟಿ ಕೃಷಿ ನಿರ್ದೇಶಕ ಶರಣಪ್ಪ ಮುದ್ಗಲ್ ಮಾತನಾಡಿ, ಕೃಷಿ ಪ್ರವಾಸೋದ್ಯಮಕ್ಕೆ ಈ ಭಾಗದಲ್ಲಿ ಸಾಕಷ್ಟು ಅವಕಾಶ ಇದ್ದು, ಇದಕ್ಕಾಗಿ ಕೆಲವು ಕಾನೂನುಗಳನ್ನು ಸಡಿಲಗೊಳಿಸಲು ಪ್ರಯತ್ನಿಸಬೇಕು ಎಂದು ಶಾಸಕರಲ್ಲಿ ಮನವಿ ಮಾಡಿದರು.

ಹಗರಿ ಕೃಷಿ ಕಾಲೇಜಿನ ಸಹ ಪ್ರಾಧ್ಯಾಪಕಿ ಶಿಲ್ಪಾ ಎಚ್. ಅವರು ಬಾಳೆಯ ಮೌಲ್ಯವರ್ಧನೆ ಬಗ್ಗೆ ಮಾಹಿತಿ ನೀಡಿದರೆ, ವಿಜಯನಗರ ಕಾಲುವೆಗಳ ಆಧುನೀಕರಣ ಯೋಜನೆಯ ತಂಡ ನಾಯಕ ಆರ್. ದೊರೆಸ್ವಾಮಿ ಅವರು ನೀರಿನ ನಿರ್ವಹಣೆ, ಕೃಷಿ ಕಾಲುವೆ, ಅಚ್ಚುಕಟ್ಟು ಪ್ರದೇಶಗಳ ಕುರಿತು ಮಾತನಾಡಿದರು. ಪ್ರಗತಿಪರ ಕೃಷಿಕ ವಿಶ್ವೇಶ್ವರ ಸಜ್ಜನ್ ಅವರು ಬೇಲದ ಮೌಲ್ಯವರ್ಧನೆ ಬಗ್ಗೆ ಮಾಹಿತಿ ನೀಡಿದರು. ಹಸಿರುನೊಂದಿಗೆ ಮಾತುಕತೆ ಮೊದಲ ಬಾರಿಗೆ ಆರಂಭವಾದ ತೋಟದ ಮಾಲೀಕ ಹಾಗೂ ಪ್ರಗತಿಪರ ಕೃಷಿಕ ಬಸಯ್ಯ ಸ್ವಾಮಿ ವೇದಿಕೆಯಲ್ಲಿದ್ದರು.

ಗಂಗಾವತಿ ಕೃಷಿ ಕಾಲೇಜಿನ ಕೀಟಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಬದರಿಪ್ರಸಾದ್ ಪಿ.ಆರ್. ಕೃತಿ ಪರಿಚಯ ಮಾಡಿದರು.

ಮಣ್ಣಿನ ಮಡಿಕೆಗೆ ಸಿರಿಧಾನ್ಯ ಸುರಿಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಲಾಯಿತು. ಬಿಡುಗಡೆ ಮಾಡಲಾದ ಪುಸ್ತಕದ ಮೊದಲ ಪ್ರತಿಯನ್ನು ಪುಸ್ತಕದ ಮುಖಪುಟದಲ್ಲಿರುವ ಮಹಿಳೆ ಫಕೀರಮ್ಮ ಅವರಿಗೆ ನೀಡಲಾಯಿತು. ಹಸಿರಿನೊಂದಿಗೆ ಮಾತುಕತೆ ಬಳಗದ ಸಂಚಾಲಕ ಮಲ್ಲಿಕಾರ್ಜುನ ಹೊಸಪಾಳ್ಯ ಪ್ರಾಸ್ತಾವಿಕ ಮಾತನಾಡಿದರು. ವಾರ್ಷಿಕೋತ್ಸವ ನೆನಪಿನಲ್ಲಿ ಜೆ.ಡಿ. ಕಚೇರಿ ಆವರಣದಲ್ಲಿ ಹೊಂಗೆ ಗಿಡವನ್ನು ಶಾಸಕರು ನೆಟ್ಟರು.

ಪರಮೇಶ್ವರ ನಾಯ್ಕ ಸ್ವಾಗತಿಸಿದರು. ವಸಂತ ಮಾಲವಿ ನಿರೂಪಿಸಿದರು. ಶಿವಕುಮಾರ್ ವಂದಿಸಿದರು.

**‘ಕೃಷಿ ಅನುಭವಗಳ ಕಥನ’**

‘ಹಸಿರು ಮಾತುಕತೆ’ ಪುಸ್ತಕ ಒಂದು ವರ್ಷ ವಿಜಯನಗರ ಜಿಲ್ಲೆ ಮತ್ತು ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ನಡೆದ ‘ಹಸಿರಿನೊಂದಿಗೆ ಮಾತುಕತೆ’ ಕಾರ್ಯಕ್ರಮದ ಸಾರಾಂಶ ರೂಪದಲ್ಲಿದ್ದು, ಹಲವು ಪ್ರಗತಿಪರ ಕೃಷಿಕರ ಯಶೋಗಾಥೆ ಇದರಲ್ಲಿದೆ.

ಹುಲಿಕೆರೆಯ ವಿಶ್ವೇಶ್ವರ ಸಜ್ಜನ, ನಂದೀಪುರದ ಮಹೇಶ್ವರ ಸ್ವಾಮೀಜಿ, ಕಮಲಾಪುರದ ಪಂಪಯ್ಯ ಮಳೇಮಠ, ವೆಂಕಟಾಪುರದ ಅನ್ನಪೂರ್ಣ, ದೇವದಾಸಿ ಕೂಪದಿಂದ ಹೊರಬಂದು ಕೃಷಿ ಮಾಡುತ್ತಿರುವ ಈಶ್ವರಮ್ಮ, ಸಿರಿಧಾನ್ಯ ಬೆಳೆಯುವ ಪಾಪಿನಾಯಕನಹಳ್ಳಿಯ ಫಕೀರಮ್ಮ, ದೇಸೀ ಬೀಜ ಸಂರಕ್ಷಕ ಕಲ್ಲಪ್ಪ, ಅಕ್ಕಡಿ ಬೇಸಾಯದಲ್ಲಿ ಪರಿಣಿತರಾದ ಕೊಟ್ಟೂರಿನ ಕೋಟ್ಯಪ್ಪ, ಅನಂತಶಯನಗುಡಿಯ ಪ್ರಸನ್ನ, ಅಹೊಸೂರಿನ ಸಣ್ಣಕ್ಕಿ ಕುಟುಂಬ, ಒಣಭೂಮಿ ತೋಟಗಾರಿಕೆ ಮಾಡುತ್ತಿರುವ ವಸಂತ ಮಾಲವಿ ಮುಂತಾದ 12 ರೈತರ ಕೃಷಿ ಬದುಕನ್ನು ಪುಸ್ತಕದಲ್ಲಿ ನಿರೂಪಿಸಲಾಗಿದೆ. ಜೊತೆಗೆ ವಿಜಯನಗರ ಅರಸರ ಕಾಲದಲ್ಲಿ ಇಲ್ಲಿನ ಕೃಷಿ ವಿವರಗಳು, ಈ ಜಿಲ್ಲೆಯ ವಿಶಿಷ್ಟ ಬಾಳೆ ತಳಿಗಳಾದ ಸಕ್ಕರೆ ಬಾಳೆ ಮತ್ತು ಸುಗಂಧಿ ಬಾಳೆ ಬಗ್ಗೆಯೂ ಮಾಹಿತಿ ನೀಡಿರುವುದು ಪುಸ್ತಕದ ವೈಶಿಷ್ಟ್ಯ.

## ಒಂದು ವರ್ಷದಿಂದ ವಶಪಡಿಸಿಕೊಂಡ ಕಳವು ಮಾಲು ಮಾಲೀಕರಿಗೆ ಹಸ್ತಾಂತರ



ಹೊಸಪೇಟೆ (ವಿಜಯನಗರ):–

ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಪೊಲೀಸರು ವಶಪಡಿಸಿಕೊಂಡ ಕಳವು ಮಾಲುಗಳನ್ನು ಅವುಗಳ ಮಾಲೀಕರಿಗೆ ಹಸ್ತಾಂತರಿಸುವ ಕಾರ್ಯಕ್ರಮ ಇಲ್ಲಿನ ಎಸ್‌ಪಿ ಕಚೇರಿಯಲ್ಲಿ ಸಂಜೆ ನಡೆಯಿತು. 1.78 ಕೋಟಿ ಮೌಲ್ಯದ ವಸ್ತುಗಳನ್ನು ಹಸ್ತಾಂತರಿಸಲಾಯಿತು. ಹತ್ತಾರು ಮಂದಿ ತಮ್ಮ ಕಳವಾದ ವಸ್ತುಗಳನ್ನು ಮರಳಿ ಪಡೆದ ಖುಷಿ ಅನುಭವಿಸಿದರು. ಚಿನ್ನದ ಸರಗಳು, ಬೆಳ್ಳಿಯ ಸಾಮಗ್ರಿಗಳು, ನಗದು, ಪಂಪ್‌ಸೆಟ್‌ಗಳು ಇದರಲ್ಲಿ ಸೇರಿದ್ದವು. ಜಿಲ್ಲಾ ಪೊಲೀಸ್ ವರಿಷ್ಠ ಶ್ರೀಹರಿಬಾಬು ಬಿ.ಎಲ್. ಅವರು ಇತರ ಹಿರಿಯ ಅಧಿಕಾರಿಗಳ ಜತೆಗೆ ವಶಪಡಿಸಿಕೊಂಡ ಸಾಮಗ್ರಿಗಳನ್ನು ಮೂಲ ಮಾಲೀಕರಿಗೆ ಹಸ್ತಾಂತರಿಸಿದರು. ಜಿಲ್ಲೆಯ ಮೂರೂ ಉಪವಿಭಾಗಗಳ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಕಳವು ಪ್ರಕರಣಗಳು ಇದರಲ್ಲಿ ಸೇರಿದ್ದವು. ‘ಕಳೆದ ವರ್ಷದ ಜೂನ್ 1ರಿಂದ ಈ ರ್ಷದ ಜೂನ್ 1ರವರೆಗಿನ ಕಳವು ಪ್ರಕರಣಗಳಲ್ಲಿ 254 ಸ್ವತ್ತಿನ ಪ್ರಕರಣಗಳು ವರದಿಯಾಗಿವೆ. ಈ ಅವಧಿಯಲ್ಲಿ ಲಾಭಕ್ಕಾಗಿ ಕೊಲೆ ನಡೆದಿಲ್ಲ. 4 ಡಕಾಯಿತಿ, 3 ಸರಗಳ್ಳತನ, 7 ಹಗಲು ಕನ್ನ ಹಾಕಿದ ಪ್ರಸಂಗ, 58 ರಾತ್ರಿ ಕನ್ನ ಹಾಕಿದ ಪ್ರಸಂಗ, 182 ಸಾಮಾನ್ಯ ಕಳತನ ಪ್ರಕರಣಗಳು ವರದಿಯಾಗಿವೆ. 87 ಪ್ರಕರಣಗಳನ್ನು ಪತ್ತೆ ಹೆಚ್ಚಲಾಗಿದೆ. ಒಟ್ಟು 162 ಜನರನ್ನು ಬಂಧಿಸಿ ಕಾನೂನು ಪ್ರಕಾರ ಕ್ರಮ ಜರುಗಿಸಲಾಗಿದೆ’ ಎಂದು ಎಸ್‌ಪಿ ಶ್ರೀಹರಿಬಾಬು ಬಿ.ಎಲ್. ಮಾಧ್ಯಮದವರಿಗೆ ತಿಳಿಸಿದರು. ‘ಒಟ್ಟು 5.54 ಕೋಟಿ ಮೌಲ್ಯದ ವಸ್ತುಗಳು ಕಳವಾಗಿವೆ. 2.15 ಕೋಟಿ ಮೌಲ್ಯದ ಮಾಲುಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಪೈಕಿ 1.78 ಕೋಟಿ ಮೌಲ್ಯದ ವಸ್ತುಗಳನ್ನು ವಾರಿಸುದಾರರಿಗೆ ಹಿಂದಿರುಗಿಸಲಾಗಿದೆ. 37.44 ಲಕ್ಷ ಮೌಲ್ಯದ ಮಾಲನ್ನು ನ್ಯಾಯಾಲಯದ ಆದೇಶ ಪಡೆದುಕೊಂಡು ಹಿಂದಿರುಗಿಸಲಾಗುವುದು’ ಎಂದರು. ‘ವಶಪಡಿಸಿಕೊಂಡ ಮಾಲುಗಳ ಪೈಕಿ 85 ಲಕ್ಷ ಮೌಲ್ಯದ 96 ದ್ವಿಚಕ್ರ ವಾಹನ, 42.31 ಲಕ್ಷ ಮೌಲ್ಯದ 118 ತೊಲೆ ಬಂಗಾರ, 95,300 ಮೌಲ್ಯದ 30 ತೊಲೆ ಬೆಳ್ಳಿ, 2.05 ಲಕ್ಷ ಮೌಲ್ಯದ 25 ಮೊಬೈಲ್, 11,71,580 ನಗದು, 3.50 ಲಕ್ಷ ಮೌಲ್ಯದ ಎಲೆಕ್ಟ್ರಾನಿಕ್ಸ್ ವಸ್ತುಗಳು, 37.45 ಲಕ್ಷ ಮೌಲ್ಯದ ಗಂಧದ ಕಟ್ಟಿಗೆ, ಟೊಯೊಟಾ ಕಾರು, 12.63 ಲಕ್ಷ ಮೌಲ್ಯದ ಸೋನಿ ಕ್ಯಾಮೆರಾ, 1 ಕಾರು, 1 ಸರ್ಕಾರಿ ಸಾರಿಗೆ ಬಸ್, 3 ಆಕಳು, 5 ಕುರಿ, 3 ಪಂಪ್‌ಸೆಟ್‌ಗಳು ಸೇರಿವೆ’ ಎಂದು ಅವರು ಮಾಹಿತಿ ನೀಡಿದರು. ಬೆರಳಚ್ಚು ಪಡೆಯುವ ಸಾಧನ: ಜಿಲ್ಲೆಯಲ್ಲಿ ರಾತ್ರಿ ಹೊತ್ತಲ್ಲಿ ಸಂಶಯಾಸ್ಪದವಾಗಿ ಓಡಾಡುವವರ ಬೆರಳಚ್ಚು ಪಡೆದು ಸಂಗ್ರಹಿಸಿಟ್ಟುಕೊಳ್ಳುವ ಸಾಧನವನ್ನು ಪೊಲೀಸರಿಗೆ ಕೊಟ್ಟಿದ್ದು, ಇದುವರೆಗೆ 2,900 ಮಂದಿಯ ಬೆರಳಚ್ಚು ಸಂಗ್ರಹಿಸಲಾಗಿದೆ. ಕಳ್ಳರನ್ನು ವಶಕ್ಕೆ ಪಡೆಯುವಲ್ಲಿ ಈ ಸಾಧನ ಬಹಳಷ್ಟು ಮಟ್ಟಿಗೆ ನೆರವಿಗೆ ಬರುತ್ತಿದೆ. ಹಂಪಿ ಸಹಿತ ಪ್ರಮುಖ ಪ್ರವಾಸಿ ತಾಣಗಳಲ್ಲಿ ಸಿ.ಸಿ.ಟಿ.ವಿ.ಕ್ಯಾಮೆರಾಗಳನ್ನು ಅಳವಡಿಸುವ ಕೆಲಸ ಪೊಲೀಸ್ ಇಲಾಖೆಯಿಂದಲೂ ನಡೆಯುತ್ತಿದೆ ಎಂದು ಶ್ರೀಹರಿಬಾಬು ಹೇಳಿದರು. ಎಎಸ್‌ಪಿ ಸಲೀಂ ಪಾಷಾ, ಡಿವೈಎಸ್‌ಪಿಗಳಾದ ಮಂಜುನಾಥ್, ಮಹಾಂತೇಶ್ ಸಜ್ಜನ್, ಮಲ್ಲೇಶಪ್ಪ ಮಲ್ಲಾಪುರ ಇದ್ದರು.

## ರೈತರು ಬೆಳೆ ವಿಮೆ ನೋಂದಣಿ ಮಾಡಿಸಲು ಕರೆ



ಕೂಡ್ಲಿಗಿ:–

ಮಳೆಯಾಶ್ರಿತ ಪ್ರದೇಶವಾದ ಕೂಡ್ಲಿಗಿ ತಾಲೂಕಿನಲ್ಲಿ ರೈತರು ಕೃಷಿ ಇಲಾಖೆ ಸೂಚಿಸಿರುವ ಬೆಳೆಗಳಿಗೆ ಕೊನೆಯ ದಿನಾಂಕದೊಳಗೆ ತಪ್ಪದೇ ಬೆಳೆ ವಿಮೆಯನ್ನು ನೋಂದಣಿ ಮಾಡಿಸಿಕೊಳ್ಳಬೇಕೆಂದು ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ತಿಳಿಸಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿದ ಇತ್ತೀಚೆಗೆ ಆಯೋಜಿಸಿದ್ದ ಜನತಾ ದರ್ಶನ ಕಾರ್ಯಕ್ರಮದ ಸಂದರ್ಭ ಕೃಷಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಮಣ್ಣು ಸಂರಕ್ಷಣೆ ಹಾಗೂ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯ ಪ್ರಚಾರ ವಾಹನಕ್ಕೆ ಚಾಲನೆ ನೀಡಿ ಮಾತನಾಡುತ್ತಾ ಅತಿವೃಷ್ಟಿ, ಅನಾವೃಷ್ಟಿಯಿಂದ ರೈತರು ಬೆಳೆ ನಷ್ಟವಾಗುವ ಸಂಭವ ಇರುವುದರಿಂದ ಪ್ರತಿಯೊಬ್ಬರೂ ಕೃಷಿ ಇಲಾಖೆ ನಿಗದಿಪಡಿಸಿದ ಬೆಳೆಗಳಿಗೆ ತಪ್ಪದೆ ಕೊನೆಯ ದಿನಾಂಕದೊಳಗೆ ಬೆಳೆವಿಮೆಯ ಕಂತನ್ನು ಪಾವತಿಸುವ ಮೂಲಕ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಶರಣಪ್ಪ ಮುದಗಲ್ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ನೋಂದಣಿಗೆ ಸರಕಾರ ಮುಂದಾಗಿದ್ದು, ಕೃಷಿ ಇಲಾಖೆಯಿಂದ ಸೂಚಿಸಿರುವ ಬೆಳೆಗಳಿಗೆ ಹತ್ತಿರದ ಬ್ಯಾಂಕ್ ಇಲ್ಲವೆ ಗ್ರಾಮ ಒನ್ ಕೇಂದ್ರಗಳಲ್ಲಿ ಬೆಳೆ ವಿಮೆ ಕಂತು ಪಾವತಿಸುವ ಮೂಲಕ ನೋಂದಣಿ ಮಾಡಿಕೊಳ್ಳಬೇಕೆಂದು ರೈತರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ, ಜಿಪಂ ಸಿಇಓ ಸದಾಶಿವ ಬಿ.ಪ್ರಭು, ಕೂಡ್ಲಿಗಿ ಸಹಾಯಕ ಕೃಷಿ ನಿರ್ದೇಶಕ ಎಂ.ಟಿ.ಸುನಿಲ್ ಕುಮಾರ್, ಕೂಡ್ಲಿಗಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ವೈ. ರವಿಕುಮಾರ.ಕೃಷಿಕ ಸಮಾಜದ ಮಾಜಿ ಅಧ್ಯಕ್ಷ ಹಾಗೂ ಸದಸ್ಯ ಬಣವಿಕಲ್ಲು ಯರಿಸ್ವಾಮಿ ಸೇರಿ ಕೃಷಿ ಇಲಾಖೆ ಸಿಬ್ಬಂದಿ ಇದ್ದರು.

## ಮಾಧ್ಯಮ ಕ್ಷೇತ್ರಕ್ಕೆ ಬಳ್ಳಾರಿ ಕೊಡುಗೆ ಮಹತ್ವದ್ದು: ಡಾ.ಕರಿಯಪ್ಪ ಮಾಳಿಗಿ

ಬಳ್ಳಾರಿ:–

ಕನ್ನಡದ ಮೊದಲ ಪತ್ರಿಕೆ ಮಂಗಳೂರು ಸಮಾಚಾರ ಮುದ್ರಣಗೊಳ್ಳುತ್ತಿದ್ದು ಬಳ್ಳಾರಿಯಲ್ಲಿ ಹಾಗಾಗಿ ಮಾಧ್ಯಮ ಕ್ಷೇತ್ರಕ್ಕೆ ಬಳ್ಳಾರಿ ಕೊಡುಗೆ ಮಹತ್ವದ್ದು ಎಂದು ಚಿತ್ರದುರ್ಗದ ಉಪನ್ಯಾಸಕ ಡಾ.ಕರಿಯಪ್ಪ ಮಾಳಿಗಿ ಹೇಳಿದ್ದಾರೆ.




ಅವರು ಇಂದು ನಗರದ ಬಿಡಿಎಎ ಸಭಾಂಗಣದಲ್ಲಿ ಜೋಳದರಾಶಿಯ ತಿಮ್ಮಪ್ಪ ಫೌಂಡೇಷನ್ ಹಾಗು ಬಳ್ಳಾ–ರಿಯ ಪತ್ರಿಕಾ ಗೆಳೆಯರು ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಮತ್ತು ಸರ್ಕಾರಿ ಶಾಲೆಯಲ್ಲಿ ಓದಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಪತ್ರಿಕಾ ದಿನಾಚರಣೆ ಮತ್ತು ಶಿಕ್ಷಣದ ಮಹತ್ವ ಕುರಿತು ಉಪನ್ಯಾಸ ನೀಡುತ್ತಿದ್ದರು.

ಕನ್ನಡ ಪತ್ರಿಕೋದ್ಯಮದ ಇತಿಹಾಸ ತಿಳಿಸಿ ಇಂದು ಇಂತಹ ಮಾಧ್ಯಮ, ಇಂತಹ ಪಕ್ಷದ್ದು ಎಂಬ ಮಾತುಗಳು ಕೇಳಿಬರುತ್ತಿದೆ. ಇದು ಸಮಾಜಕ್ಕೆ ಧ–ಕ್ಕೆ ತರುವಂತಹುದು. ಅದಕ್ಕಾಗಿ ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ಮಾಧ್ಯಮಗಳು ಉತ್ತಮ ಸಮಾಜ ಕಟ್ಟಲು ಸಮಾನತೆಯಿಂದ, ಸ್ಪಷ್ಟ ವರದಿಗಳ ಮೂಲಕ ಸಮಾದ ಕನ್ನಡಿಯಾಗಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳನ್ನು ಉದ್ದೇಶಿಸಿ, ದಿನ ನಿತ್ಯ ಪತ್ರಿಕೆ ಓದಿದವರು ಮಾತ್ರ ಎಂತಹುದೇ ಸಾಮಾನ್ಯ ಪರೀಕ್ಷೆಗಳನ್ನು ಎದಿರಿಸುವ ಬುದ್ದಿಮತ್ತೆ ಪಡೆಯಬಲ್ಲರು ಎಂದರು ಪತ್ರಿಕೆಯನ್ನು ಓದುದುವುದು ನಿರಂತರವಾಗಿರಬೇಕು ಏಕೆಂದರೆ, ಸಮಾಜದ ಆಗು ಹೋಗುಗಳನ್ನು ಅರಿಯದಿದ್ದರೆ ಇಂದಿನ ಸ್ಪರ್ಧಾ ಯುಗದಲ್ಲಿ ನಾವು ನಮ್ಮ ಬದುಕು ರೂಪಿಸಿಕೊಳ್ಳಲು ಆಗದು ಎಂದರು.

ಚಿತ್ರದುರ್ಗದ ಪತ್ರಕರ್ತ ಚಿಕ್ಕಪ್ಪನಹಳ್ಳಿ ಷಣ್ಮುಖಪ್ಪ ಮಾತನಾಡಿ, ವರದಿಗಾರರಾದವರು ಕೇವಲ ರಾಜಕೀಯ ಸೇರಿದಂತೆ ದಿನನಿತ್ಯದ ವಿಷಯಗಳ ವರದಿಗಾರಿಕೆಗೆ ಸೀಮಿತವಾಗದೆ ಅಭಿವೃದ್ಧಿ ಕುರಿತಾದ ವರದಿಗಳ ಬಗ್ಗೆ ಹೆಚ್ಚು ಹೆಚ್ಚು ಒತ್ತುಕೊಡಬೇಕು ಎಂದರು,

ಶಿವಮೊಗ್ಗದ ಪತ್ರಕರ್ತ ಮಾರ್ಕ್ಸ್ ತೇಜಸ್ವಿ ಮಾತನಾಡಿ, ಸಮಾಜಿಕ ಜಾಲತಾಣದಲ್ಲಿ ಹರಿದಾಡುವ ಫೇಕ್ ನ್ಯುಸ್ ಗಳ ಬಗ್ಗೆ ಮಹತ್ವ ನೀಡಬೇಕಿಲ್ಲ, ಮಹತ್ವದ ವಿಷಯಗಳು ಬಂದಾಗ ಫ್ಯಾಕ್ಟ್ ಚೆಕ್ ಮಾಡಿ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು ಸಾನಿಧ್ಯವಹಿಸಿ ಆಶೀರ್ವ ಚನ ನೀಡಿದರು.

ಎಸ್ಪಿ ರಂಜಿತ್ ಕುಮಾರ್ ಬಂಡಾರು ಅವರು ಕಾರ್ಯಕ್ರಮ ಉದ್ಘಾಟನೆ ಮಾಡಿದರು.

ಮಾಧ್ಯಮ ಕ್ಷೇತ್ರದಲ್ಲಿ ವರದಿಗಾರರು, ಛಾಯಾಗ್ರಾಹಕರು ಮತ್ತು ವಿಡಿಯೋ ಜರ್ನಲಿಸ್ಟ್ ಅವರನ್ನು ಸನ್ಮಾನಿಸಿ ಗೌರವಿಸಲಾಯ್ತು. ಬಳಿಕ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯ್ತು.

ಪತ್ರಕರ್ತ ಬಳ್ಳಾರಿಯ ಎಂ.ಅಹಿರಾಜ್, ಹೊನಕೆರೆ ನಂಜುಂಡೇಗೌಡ, ಡಿಡಿಪಿಐ ಉಮಾದೇವಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಜೆಟಿ ಫೌಂಡೇಷನ್ ನ ತಿಮ್ಮಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಜಾಹಿರಾತು ವಿಭಾಗದ ವ್ಯವಸ್ಥಾಪಕ ನಾಗಿದ್ದ ನಾನು ಈಗ ಹೊರಗಿದ್ದು ಪತ್ರಿಕಾ ದಿನಾಚರಣೆ ಹಮ್ಮಿಕೊಳ್ಳುವುದು ಸೂಕ್ತ ಎಂದು. ಸರ್ಕಾರಿ ಶಾಲೆಯ ವಿದ್ಯಾರ್ಥಿಗಳ ಪ್ರೋತ್ಸಾಹಕ್ಕಾಗಿ ಈ ಸಮಾರಂಭ ಹಮ್ಮಿಕೊಂಡಿದ್ದಾಗಿ ಹೇಳಿದರು.

ಪತ್ರಕರ್ತ ಶಶಿಧರ ಮೇಟಿ ಆಶಯ ನುಡಿ ನುಡಿದರು.

## ಪ್ರಾಥಮಿಕ ಆರೋಗ್ಯ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ

ಮೂಡಲಗಿ:–

ಯಾದವಾಡ ಹಾಗೂ ಸುತ್ತಮುತ್ತಲಿನ ಬಡರೋಗಿಗಳಿಗೆ ಅನುಕೂಲವಾಗಲು ಪ್ರಾಥಮಿಕ ಆರೋಗ್ಯ ಕೇಂದ್ರದ ನೂತನ ಕಟ್ಟಡವನ್ನು ಸಾರ್ವಜನಿಕರಿಗೆ ಅರ್ಪಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಸಾರ್ವಜನಿಕರ ಮನವಿ ಮೇರೆಗೆ ಈ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳುವುದಾಗಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು. ತಾಲೂಕಿನ ಯಾದವಾಡ ಗ್ರಾಮದಲ್ಲಿ ಸೋಮವಾರ ಸಂಜೆ ಶಾಸಕ ಬಾಲಚಂದ್ರ ಜಾರಕಿಹೊಳಿ, ದಾಲ್ಮೀಯಾ ಸಿಮೆಂಟ್ (ಭಾರತ) ಲಿಮಿಟೆಡ್ ಹಾಗೂ ಮೂಡಲಗಿ ತಾಲೂಕು ಪಂಚಾಯತಿ ಇವರುಗಳ ವಿಶೇಷ ಅನುದಾನದಲ್ಲಿ ಸುಮಾರು 70 ಲಕ್ಷ ರೂಗಳ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಯಾದವಾಡ ಪ್ರಾಥಮಿಕ ಆರೋಗ್ಯ ಕೇಂದ್ರದ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆಂದು ಹೇಳಿದರು. ಕೋವಿಡ್ ಸಂದರ್ಭದಲ್ಲಿ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲು ಈ ಭಾಗದಲ್ಲಿ ಶಿಥಿಲಗೊಂಡಿದ್ದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಪುನ:ಶ್ಚೇತನ ನೀಡಲು ಹೊಸ ಕಟ್ಟಡವನ್ನು ನಿರ್ಮಿಸಲು ಯೋಜಿಸಿದ್ದೇವು. ಅದರಂತೆ ಸಾರ್ವಜನಿಕರ ಹಿತವನ್ನು ಗಮನದಲ್ಲಿಟ್ಟು ನಾನು, ದಾಲ್ಮೀಯಾ ಸಿಮೆಂಟ್ ಕಾರ್ಖಾನೆ ಹಾಗೂ ತಾಲೂಕು ಪಂಚಾಯತಿದವರು ಇದಕ್ಕಾಗಿ ಅನುದಾನವನ್ನು ನೀಡಿದ್ದೇವೆ. ಅದಕ್ಕಾಗಿ ಸಾಮಾಜಿಕ ಕಾರ್ಯಗಳಿಗೆ ಹೆಸರುವಾಸಿಯಾದ ದಾಲ್ಮೀಯಾ ಕಾರ್ಖಾನೆಗೆ ಕೃತಜ್ಞತೆ ಸಲ್ಲಿಸುವುದಾಗಿ ಅವರು ತಿಳಿಸಿದರು. ಯಾದವಾಡ ಗ್ರಾಮವು ದಿನದಿಂದ ದಿನಕ್ಕೆ ಬೆಳೆಯುತ್ತಾ ಅಭಿವೃದ್ಧಿಯಾಗುತ್ತಿದೆ. ಇಲ್ಲಿ ಸಕ್ಕರೆ ಹಾಗೂ ಸಿಮೆಂಟ್ ಕಾರ್ಖಾನೆಗಳು ತಲೆಯೆತ್ತಿವೆ.



ರಸ್ತೆ ಸಂಚಾರವು ಕೂಡಾ ಜನದಟ್ಟನೆಯಿಂದ ಕೂಡಿದೆ. ಯಾದವಾಡಕ್ಕೆ ಹೊಂದಿಕೊಂಡಿರುವ ಅಕ್ಕಪಕ್ಕದ ಮುಧೋಳ, ರಾಮದುರ್ಗ, ಲೋಕಾಪೂರಕ್ಕೆ ಹೋಗುವ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು. ಅರಭಾವಿ ಕ್ಷೇತ್ರದಲ್ಲಿ ರಸ್ತೆ ದುರಸ್ತಿ ಕಾಮಗಾರಿಗಳನ್ನು ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಈಗಾಗಲೇ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರಲ್ಲಿ ಮನವಿ ಮಾಡಲಾಗಿದೆ. ಗ್ರಾಮದೊಳಗಿನ ರಸ್ತೆಗಳನ್ನು ಸ್ಥಳೀಯ ಗ್ರಾಮ ಪಂಚಾಯತಿ ಸಮಿತಿಯವರು ಕೈಗೊಳ್ಳಲು ಶಾಸಕರು ಸಲಹೆ ನೀಡಿದರು. ಅರಭಾವಿ ಕ್ಷೇತ್ರದಲ್ಲಿ ಎಲ್ಲ ಸಮಾಜಗಳ ಬಾಂಧವರು ಅಣ್ಣ–ತಮ್ಮಂದಿರರಂತೆ ಬಾಳುತ್ತಿದ್ದಾರೆ. ಪರಸ್ಪರ ಸಹೋದರತ್ವ ಮನೋಭಾವನೆಯಿಂದ ಬದುಕುತ್ತಿದ್ದೇವೆ. ಗ್ರಾಮಾಭಿವೃದ್ದಿಗೆ ಎಲ್ಲರೂ ಒಂದಾಗಿ ಒಗ್ಗಟ್ಟಿನಿಂದ ದುಡಿಯಬೇಕು. ಅಂ–ದಾಗ ಮಾತ್ರ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ದಾಲ್ಮೀಯಾ ಸಿಮೆಂಟ್(ಭಾರತ) ಲಿ. ಯಾದವಾಡ ಘಟಕದ ಮುಖ್ಯಸ್ಥ ಪ್ರಭಾತಕುಮಾರ ಸಿಂಗ್, ಗ್ರಾ.ಪಂ ಅಧ್ಯಕ್ಷ ಬಸವರಾಜ ಭೂತಾಳಿ, ತಾ.ಪಂ ಇಓ ಎಫ್.ಜಿ.ಚಿನ್ನನ್ನವರ, ಎಡಿ–ಎಚ್‌ಓ ಡಾ. ಈಶ್ವರ ಗಡೇದ, ಟಿಎಚ್‌ಓ ಮುತ್ತಣ್ಣ ಕೊಪ್ಪದ, ತಜ್ಞವೈದ್ಯ ಡಾ. ಆರ್.ಎಸ್.ಬೆಣಚಿನಮರಡಿ, ಬಿಇಓ ಅಜೀತ ಮನ್ನಿಕೇರಿ ಅವರು ಉಪಸ್ಥಿತರಿದ್ದರು.

## ಕಾನಿಪದಿಂದ ಪವಿತ್ರಾಗೆ ಗೌರವ ಸನ್ಮಾನ

ಬಳ್ಳಾರಿ:–




ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ನಿನ್ನೆ ಹಾವೇರಿ ನಗರದ ಶ್ರೀ ಗುರುಸಿದ್ದರಾಮೇಶ್ವರ ಕಲ್ಯಾಣ ಮಂಟಪದಲ್ಲಿ ನಡೆದ 2024 ರ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ಪತ್ರಕರ್ತ ದಂಪತಿಗಳ ಕಂಪ್ಲಿ ತಾಲೂಕಿನ ಎಮ್ಮಿಗನೂರು ಗ್ರಾಮದ ಜಿ.ಎಂ.ಪವಿತ್ರಾಗೆ ಸನ್ಮಾನಿಸಿ ಗೌರವಿಸಿ ಪ್ರೋತ್ಸಾಹ ದನ ನೀಡಲಾಗಿದೆ. ಎಮ್ಮಿಗನೂರು ಗ್ರಾಮದ ಬಸಯ್ಯಸ್ವಾಮಿ ಅವರ ಪುತ್ರಿ ಜಿ.ಎಂ.ಪವಿತ್ರ ಎಸ್ ಎಸ್ ಎಲ್ ಸಿಯಲ್ಲಿ ಶೇ 92:5 ಅಂಕ ಪಡೆದಿದ್ದರು. ಈ ವೇಳೆ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬೊಮ್ಮಾಯಿ, ರಾಜಾಧ್ಯಕ್ಷ ಶಿವಾನಂದ ತಗಡೂರ್, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಹಾವೇರಿ ಜಿಲ್ಲಾ ಸಮಿತಿಯವರು, ಪತ್ರಕರ್ತರು, ಪೋಷಕರು ಭಾಗವಹಿಸಿದ್ದರು.

## ಅರಿವಿರದ ಭಯಕ್ಕೆ ಅಂಜಬೇಡಿ

ಕಲಬುರಗಿ:–

"ವರ್ತಮಾನ ಕಾಲದ ಸಮಸ್ಯೆ,ಭಯಗಳು ಇರಲಿ . ಆದರೆ ನಮಗೆ ಗೊತ್ತೇ ಇರದ ಮುಂದೆ ಭವಿಷ್ಯತ್ ಕಾಲೀನದಲ್ಲಿ ಆಗಬಹುದಾದ ಭಯಗಳಿಂದಲೂ ದೇವರು ರಕ್ಷಿಸುತ್ತಾನೆ. ಆದರೆ ಆ ದೇವನಲ್ಲಿ ವಿಶ್ವಾಸವಿರಬೇಕಷ್ಟೆ"ಹೀಗೆಂದು ಪರಮ ಪೂಜ್ಯ ಉತ್ತರಾದಿ ಮಠಾಧೀಶರಾದ ಶ್ರೀಸತ್ಯಾತ್ಮತೀರ್ಥರು ಸಂದೇಶವನ್ನು ನೀಡಿದರು. ಮಳಖೇಡ ಕ್ಷೇತ್ರ ,ಶ್ರೀಮಟ್ಟೀಕಾಕೃತ್ಪಾದರ ಮೂಲವೃಂದಾವನ ಸನ್ನಿಧಾನ ಇಲ್ಲಿ ಶ್ರೀಮದ್ಭಾಗವತ ಸಪ್ತಾಹ ಕಾರ್ಯಕ್ರಮದಲ್ಲಿ ಅನುಗ್ರಹ ಸಂದೇಶ ನೀಡುತ್ತಾ ನಮ್ಮನ್ನು ದೇವರು ಎಲ್ಲಾ ಸ್ಥಳಗಳಿಂದ ರಕ್ಷಿಸಿದ್ದಾನೆ. ಲೋಕದಲ್ಲಿ ವಾಸಿಸುವ ನಮಗೆ ಅಪಾಯ ,ಭಯಗಳು ಹೇಗುಂಟಾಗುತ್ತವೆ ಇದು ತಿಳಿದಿರುವುದಿಲ್ಲ. ಬೇರೆ ಗ್ರಹಗಳಿಂದ, ಸೂರ್ಯ ಕಿರಣಗಳಿಂದ ಇಲ್ಲಿ ವಾತಾವರಣದಲ್ಲಿ ಆಕ್ಸಿಜನ್ ಇಟ್ಟು ರಕ್ಷಿಸಿದ್ದಾನೆ.ಅಷ್ಟೇ ಅಲ್ಲ.ಅವನು “ತ್ರ್ಯಧೀಶಃ”. ಎಲ್ಲಾ ಕಾಲಗಳಿಗೂ ಸ್ವಾಮಿಯಾಗಿದ್ದಾನೆ ಆದ್ದರಿಂದ ನಮಗೆ ಗೊತ್ತೇ ಇರದ ಭವಿಷ್ಯತ್ ಕಾಲೀನ ಆಪತ್ತುಗಳಿಂದಲೂ ರಕ್ಷಿಸು ತ್ತಾನೆ. ಒಬ್ಬ ಡಾಕ್ಟರ್ ಬಳಿ ಹೋಗಿ" ನನಗೆ 10ವರ್ಷದ ನಂತರ ಒಂದು ರೋಗ ಯಾವುದು ಬರುತ್ತೋ ಅದಕ್ಕೆ ಔಷಧ ಈಗ ಕೊಡು" ಎಂದರೆ ಅದಕ್ಕೆ ಆ ಡಾಕ್ಟರ್ ಏನೂ ಮಾಡಲಾರ.ನಮ್ಮ ಜೀವನದಲ್ಲಿ ಹಿಂದೆ ನಾವೇನು ಪಾಪ ಕರ್ಮ ಮಾಡಿದ್ದೇವೆಯೋ ಗೊತ್ತಿಲ್ಲ. ಅದಕ್ಕೆ ಶಿಕ್ಷೆಯಾಗಿ ಮುಂದೆ ಯಾವ ಕಾಲದಲ್ಲಿ ಯಾವ ದುಃಖ ಗಂಡಾತರಗಳು ಕಾದಿದೆಯೋ ಗೊತ್ತಿಲ್ಲ.ಆದರೆ ಆ ಭಗವಂತನು " ತ್ರ್ಯಧೀಶಃ" .ನಾವು ಅವನಲ್ಲಿ ಭಕ್ತಿಯಿಂದ ವಿಶ್ವಾಸ ಮಾಡಿದರೆ ಮೂರೂ ಕಾಲಗಳಿಗೂ ನಿಯಾಮಕನಾದ ಅವನು" ಇಂದೇನು" “ಮುಂದೇನು” “ಹಿಂದೇನು”. ಎಲ್ಲವನ್ನೂ ತಿಳಿದವ. ಮಾತ್ರ ವಲ್ಲ. ಅದಕ್ಕೇನು ಉಪಾಯ ಅನ್ನುವುದನ್ನೂ ಶಾಸ್ತ್ರದಲ್ಲಿ ಪರಮಾತ್ಮ ತಿಳಿಸಿಕೊಟ್ಟಿದ್ದಾನೆ. ಅವನ ಸ್ತೋತ್ರ,ಜಪ,ಪಠನ ,ಪಾರಾಯಣ,ಮಹಾತ್ಮರ ಸೇವೆ ಇವೆಲ್ಲವನ್ನೂ ಮಾಡಿದರೆ ಮೂರೂ ಕಾಲದ ಆಪತ್ತನ್ನು ಪರಿಹಾರ ಮಾಡುತ್ತಾನೆ. ಪರಮಾತ್ಮ ಅಂತಹ ದಯಾಲು ಆಗಿದ್ದಾನೆ. ಜೀವನದಲ್ಲಿ ಕಷ್ಟಗಳು ಬಂದಾಗ ನಮ್ಮ ಪ್ರಯತ್ನ ಕೈ ಮೀರಿ ಹೋದಾಗ ಹತಾಶರಾಗದೆ, ಚಿಂತಾಕ್ರಾಂತರಾಗದೆ ,ಅವನಲ್ಲಿ “ಭಕ್ತಿಯಿಂದ ವಿಶ್ವಾಸ ಮಾಡಿ” ಎಂದು ಭಾಗವತ ಸಂದೇಶ ಕೊಟ್ಟಿದೆ ಎಂದು ಶ್ರೀಗಳು ತಿಳಿಸಿದರು.

# ಶಸ್ತ್ರಚಿಕಿತ್ಸಕ ಡಾ.ವಿಜಯಕುಮಾರ್‌ಗೆ ಬೀಳ್ಕೊಡುಗೆ

ಕೋಲಾರ:–

ಜಿಲ್ಲಾ ಎಸ್‌ಎನ್‌ಆರ್ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕರಾಗಿ ಸೇವೆ ಸಲ್ಲಿಸುತ್ತಿದ್ದ ಡಾ.ಎಸ್.ಎನ್.ವಿಜಯಕುಮಾರ್ ಅವರನ್ನು ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ವಿಜಯಕುಮಾರ್, ತಮ್ಮ ಸೇವಾ ಅವಧಿಯಲ್ಲಿ ಉತ್ತಮ ಕೆಲಸ ಮಾಡಿದ ಆತ್ಮತೃಪ್ತಿ ಇದೆ, ನನ್ನ ಕರ್ತವ್ಯ ನಿರ್ವಹಣೆಗೆ ಜಿಲ್ಲಾಧಿಕಾರಿಗಳು, ಜಿಪಂ ಸಿಇಒ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ವೈದ್ಯರು, ಶುಶ್ರೂಷಕಿಯರು,ಸಿಬ್ಬಂದಿ ಎಲ್ಲರೂ ಸಹಕಾರ ನೀಡಿದ್ದು ಅವರಿಗೆ ಧನ್ಯವಾದ ಸಲ್ಲಿಸುವುದಾಗಿ ತಿಳಿಸಿದರು.

ಆರೋಗ್ಯ ಇಲಾಖೆ ಪ್ರಯೋಗಶಾಲಾ ತಾಂತ್ರಿಕರ ಸಂಘದ ನಾರಾಯಣಪ್ಪ ಮಾತನಾಡಿ, ಆರೋಗ್ಯ ಇಲಾಖೆ ಹಾಗೂ ಜಿಲ್ಲಾಸ್ಪತ್ರೆಯಲ್ಲಿ ವಿವಿಧಹುದ್ದೆಗಳಲ್ಲಿ ಸೇವೆ ಸಲ್ಲಿಸಿ ಇತರರಿಗೆ ಮಾದರಿಯಾಗಿದ್ದ



ವಿಜಯಕುಮಾರ್ ಅವರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರು ಹಾಗು ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸಿ ಇದೀಗ ನಿವೃತ್ತರಾಗಿರುವ ವಿಜಯಕುಮಾರ್ ಅವರು, ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಶೆಟ್ಟಿಹಳ್ಳಿಯಲ್ಲಿ ವಿಮಲಮ್ಮ ನಾರಾಯಣನ್ ದಂಪತಿಗಳ ಮಗನಾಗಿ ಜನಿಸಿದ ಇವರು ತನ್ನ 1981ರಿಂದ 1987 ವೈದ್ಯಕೀಯ ಪದವಿ ಬಳ್ಳಾರಿ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಮುಗಿಸಿ ನಂತರ ಮೈಸೂರು ವೈದ್ಯಕೀಯ ಕಾಲೇಜಿನಲ್ಲಿ ಮೂಳೆ ತಜ್ಞರಾಗಿ ಸ್ನಾತಕೋತ್ತರ ಪದವಿ ಮುಗಿಸಿದ್ದಾರೆ ಎಂದು ತಿಳಿಸಿದರು.

1991ರಲ್ಲಿ ಮುಳಬಾಗಿಲು ಸಾರ್ವಜನಿಕ ಆಸ್ಪತ್ರೆಯಲ್ಲಿ ಮೊದಲು ವೈದ್ಯರಾಗಿ ಸೇರಿ ಅಲ್ಲಿ ಕರ್ತವ್ಯ ನಿರ್ವಹಿಸಿ, ನಂತರ ಅಲ್ಲಿಂದ ತಾಯಲೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ, ನಂತರ ಮುಳಬಾಗಿಲು ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸಿದ್ದು, ಇದಾದ ನಂತರ ಯಲ್ದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ ಮಾಡಿದ್ದಾರೆ.

ಇದಾದ ನಂತರ ಜಿಲ್ಲಾ ಕ್ಷಯ–ರೋಗ ನಿವಾರಣಾ ಅಧಿಕಾರಿಯಾಗಿ ಸೇವೆ ಸಲ್ಲಿಸಿದ ವಿಜಯಕುಮಾರ್, ಕೀಲು ಮತ್ತು ಮೂಳೆ ತಜ್ಞರಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಕರ್ತವ್ಯ ಮುಗಿಸಿ ನಂತರ ಜಿಲ್ಲಾ ಆರೋಗ್ಯಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾಗಿ ಸೇವೆ ಸಲ್ಲಿಸಿದರು.ನಂತರ 2022ರಲ್ಲಿ ಜಿಲ್ಲಾಆಸ್ಪತ್ರೆ ಜಿಲ್ಲಾ ಶಸ್ತ್ರ ಚಿಕಿತ್ಸಕರು ಹಾಗು ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶು ಪಾಲರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಿ ಇದೀಗ ಸೇವೆಯಿಂದ ನಿವೃತ್ತರಾಗಿದ್ದಾರೆ.

ಸದಾ ಜನಸ್ನೇಹಿಯಾಗಿ ರೋಗಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದ ಡಾ.ವಿಜಯಕುಮಾರ್ ಅವರ ನಿವೃತ್ತಿ ಜೀವನ ಸುಖಕರವಾಗಿರಲಿ, ನಿವೃತ್ತಿ ನಂತರವೂ ರೋಗಿಗಳಿಗೆ ಅವರ ಸೇವೆ ಸಿಗಲಿ ಎಂದು ಪ್ರಾರ್ಥಿಸಲಾಯಿತು.

ಈ ಸಂದರ್ಭದಲ್ಲಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿ, ಶುಶ್ರೂಷಕಿಯರು ಸೇರಿದಂತೆ ಹಲವಾರು ಮಂದಿ ಹಾಜರಿದ್ದರು.

# ಸಾಮಾಜಿಕ ಜಾಲತಾಣವನ್ನು ಸಮಾಜದ ಒಳಿತಿಗಾಗಿ ಬಳಸಿ : ಸಿ.ಎಂ ಸಿದ್ದರಾಮಯ್ಯ



ಬೆಂಗಳೂರು:–

ಸಾಮಾಜಿಕ ಜಾಲತಾಣ ಮತ್ತು ಮಾಧ್ಯಮಗಳ ತಂತ್ರಜ್ಞಾನವನ್ನು ಸಮಾಜದ ಒಳಿತಿಗೆ ಉಪಯೋಗಿಸಬೇಕು. ಮಾಧ್ಯಮಗಳಲ್ಲಿ ಸುಳ್ಳು ವರದಿ ಬಿತ್ತರಿಸುವ ಬಗ್ಗೆ ನಿಗಾ ಇಡಲು ಪ್ರತಿ ಜಿಲ್ಲೆಯಲ್ಲಿ ನಿಯಂತ್ರಣ ಘಟಕ ಸ್ಥಾಪಿಸಲಾಗುವುದು ಎಂದು ರಾಜ್ಯದ ಸನ್ಮಾನ್ಯ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯ ರವರು ಹೇಳಿದರು. ಇಂದು ನಗರದ ಕಬ್ಬನ್ ಉದ್ಯಾನವನದಲ್ಲಿರುವ ಪ್ರಸ್ ಕ್ಲಬ್ ಆವರ ಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪ್ರಸ್ ಕ್ಲಬ್ ಫ್ ಬೆಂಗಳೂರು ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಸಹಯೋಗದಲ್ಲಿ ಪತ್ರಿಕಾ ದಿನಾಚರಣೆ 2024ರ ಅಂಗವಾಗಿ ಆಯೋಜಿಸಲಾಗಿದ್ದ "ಮಾಧ್ಯಮ: ಸಾಮಾಜಿಕ ಜಾಲತಾಣ" ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಾವು ಈ ಹಿಂದೆ ಟಿ.ವಿ ಮತ್ತು ರೇಡಿಯೊ ಮಾಧ್ಯಮಗಳ ಮೂಲಕ ಸುದ್ದಿ ಪಡೆಯುತಿದ್ದೆವು, ಆದ–ರೆ ಈಗಿನ ಆಧುನಿಕ ಯುಗದಲ್ಲಿ ವಾಟ್ಸ್ ಆಪ್, ಯೂಟ್ಯೂಬ್ ಮತ್ತು ಫೇಸ್ ಬುಕ್ ನಂತಹ ಸಾಮಾಜಿಕ ಜಾಲತಾಣದಲ್ಲಿ ಅತೀ ವೇಗವಾಗಿ ಸುದ್ದಿಗಳು ಜನರಿಗೆ ತಲುಪುತ್ತಿವೆ ಆದರೆ ಈ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾಗುವ ಸುಳ್ಳು ವದಂತಿಗಳಿಗೆ ಕಡಿವಾಣ ಹಾಕಿ, ಮಾಧ್ಯಮಗಳು ಜನರಿಗೆ ಸತ್ಯಸಂಗತಿಗಳನ್ನು ತಲುಪಿಸುವ ನಿಟ್ಟನಲ್ಲಿ ಪ್ರಯತ್ನಿಸಬೇಕು ಎಂದು ಕಿವಿ ಮಾತು ಹೇಳಿದರು. ಹಿರಿಯ ಪತ್ರಕರ್ತರಾದ ಕೃಷ್ಣ ಪ್ರಸಾದ್ ರವರು ಮಾತನಾಡಿ, ಸಾಮಾಜಿಕ ಜಾಲತಾಣ ಮಾಧ್ಯಮಗಳಲ್ಲಿ ಸುದ್ದಿ ಅತೀ ವೇಗವಾಗಿ ಜನರಿಗೆ ತಲಪುತ್ತಿದ್ದು, ಸುಳ್ಳು ಸುದ್ದಿಗಳ ನಿಯಂತ್ರಣ–ಕ್ಕೆ ಯಾವುದೇ ರೂಪರೇಷೆಗಳಿರುವುದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಸಾಂಪ್ರದಾಯಿಕ ಮಾಧ್ಯಮಗಳು ಸಾಮಾಜಿಕ ಜಾಲತಾಣಗಳಂತೆ ಜನರನ್ನು ಸುಲಭವಾಗಿ ತಲುಪುವ ಕೌಶಲ್ಯ ಬೆಳೆಸಿಕೊಂಡು ಸುಳ್ಳು ಸುದ್ದಿಗಳ ವರದಿಗಳು ಬಿತ್ತರವಾಗದಂತೆ ಎಚ್ಚರ ವಹಿಸಬೇಕು ಎಂದು ಸಲಹೆ ನೀಡಿದರು.

# ಪತ್ರಿಕೋದ್ಯಮ ಒಂದು ಪವಿತ್ರ ಧರ್ಮ: ಗೋಪಾಲ ನಾಯಕ

ವಿಜಯಪುರ:–

ಪತ್ರಿಕೋದ್ಯಮ ಎನ್ನುವುದೇ ಒಂದು ಪವಿತ್ರ ಧರ್ಮವಾಗಿದ್ದು ಇದರಲ್ಲಿ ನಾವು ನಿಸ್ವಾರ್ಥವಾಗಿ ಸೇವೆ ಸಲ್ಲಿಸುವುದರ ಮೂಲಕ ಅದನ್ನು ಉಳಿಸಿ ಬೆಳೆಸಿಕೊಂಡು ಹೋಗಬೇಕು ಎಂದು ನಗರದ ಹಿರಿಯ ಪತ್ರಕರ್ತ ಗೋಪಾಲ ನಾಯಕ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಹಾಗೂ ಇತಿಹಾಸ ಅಧ್ಯಯನ ವಿಭಾಗದ ವತಿಯಿಂದ ಸೋಮವಾರ ಆಯೋಜಿಸಿದ್ದ 'ಪತ್ರಿಕಾ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾಧ್ಯಮದಲ್ಲಿ ಪತ್ರಿಕೆಗಳು ವಿಶಾಲವಾಗಿ ಬೆಳೆದಿದ್ದು, ಇದರಲ್ಲಿ ತಂತ್ರಜ್ಞಾನದ ಪ್ರಭಾವ ಕೂಡಾ ಜಾಸ್ತಿಯಾಗಿವೆ. ಇಂದು ಪತ್ರಿಕೋದ್ಯಮದಲ್ಲಿ ಬರುವ ಸುದ್ದಿಗಳೇ ನಿಜವಾದ ಹಾಗೂ ಸತ್ಯ ಸತ್ಯಾಂಶವುಳ್ಳ ಸುದ್ದಿಗಳು ಎಂದು ಹೇಳಲು ನನಗೆ ಹೆಮ್ಮೆ ಅನಿಸುತ್ತದೆ. ಪತ್ರಿಕೆಗಳು ಜನಪರವಾಗಿದ್ದು, ಜನರ ಸಮಸ್ಯೆಗಳನ್ನು ಬಗೆಹರಿಸಿ ಸರಕಾರದ ಗಮನ ತರುವುದೇ ಇದರ ಗುರಿಯಾಗಿದೆ. ಪತ್ರಿಕೆಗಳು ಜನ ಮತ್ತು ಸರಕಾರದ ನಡುವೆ ಸೇತುವೆಯಾಗಿ ಕೆಲಸ ಮಾಡಬೇಕು. ಪತ್ರಿಕೆಗಳಲ್ಲಿ ಕೆಲಸ ಮಾಡುವಾಗ ಅನೇಕ ಅಡತಡೆಗಳು ಬಂದರೂ ಅವುಗಳನ್ನು ಎದುರಿಸಿ ನಿಲ್ಲಬೇಕು ಎಂದರು.

ಇದೇ ಸಂದರ್ಭದಲ್ಲಿ ಕತಾರನ ಮಾಧ್ಯಮ ತಜ್ಞೆ ಮಾಗೇಶ್ವರಿ ಮಾತನಾಡಿ, ಕನ್ನಡ ಭಾಷೆಯ ಪ್ರಚಾರ ನಿಜಕ್ಕೂ ಶ್ಲಾಘನೀಯ. ಇಂದು ನಾವು ಕನ್ನಡ ಪತ್ರಿಕೋದ್ಯಮದ ಪರಂಪರೆಯನ್ನು ಆಚರಿಸುತ್ತಿದ್ದು, ಇದರ ಜವಾಬ್ದಾರಿ ಕೂಡ ನೆನಪಿಸಿಕೊಳ್ಳುವ ಸಮಯ.

ವಿದ್ಯಾರ್ಥಿನಿಯರು ನಾಳೆಯ ಬೆಳಕಾಗಿದ್ದು ಧೈರ್ಯದಿಂದ ಹೊರಹೊಮ್ಮಬೇಕು. ಇಂದಿನ ತಂತ್ರಜ್ಞಾನದ ಕ್ಷಿಪ್ರ ಪ್ರಗತಿಗೆ ಸಾಕ್ಷಿಯಾಗಿರುವಂತೆ ಪತ್ರಕರ್ತರು ಶ್ರಮಿಸಬೇಕಾಗಿದೆ. ಕೃತಕ ಬುದ್ಧಿಮತ್ತೆಯ, ವರ್ಚುವಲ್ ರಿಯಾಲಿಟಿ ಮತ್ತು ಮಲ್ಟಿಮೀಡಿಯಾ ಸ್ಟೋರಿ ಹೀಗೆ ಹತ್ತು ಹಲವು ತಂತ್ರಜ್ಞಾನಗಳು ಕಣ್ಣಮುಂದೆ ಇದ್ದು ಅದನ್ನು ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ ಮಹಿಳಾ ವಿವಿಯ ಕುಲಪತಿ ಪ್ರೊ. ಬಿ.ಕೆ. ತುಳಸಿಮಾಲ ಮಾತನಾಡಿ, ಪತ್ರಿಕೆಯಲ್ಲಿ ಎಷ್ಟೋ ಮಹನಿಯರ ಸಾಧನೆ ಆಗಾಧವಾಗಿದೆ.




ಅವರಿಗೆ ಈ ಸಂದರ್ಭದಲ್ಲಿ ಕೃತಜ್ಞತೆ ಸಲ್ಲಿಸಿ, ಇಂದು ಕನ್ನಡ ಪತ್ರಿಕಾ ದಿನಾಚರಣೆಯನ್ನು ಸಂಭ್ರಮಿಸಬೇಕಾಗಿದೆ. ಇಂದು ಮಾಧ್ಯಮ ಎಂಬುದು ಪ್ರತಿಯೊಂದು ಕ್ಷೇತ್ರಕ್ಕೂ ಅವಶ್ಯಕತೆಯಿದೆ. ಪತ್ರಿಕೋದ್ಯಮದಲ್ಲಿ ಸಾಕಷ್ಟು ಪೈಪೋಟಿ ಇದ್ದರೂ, ಎಲ್ಲಾ ಪತ್ರಿಕೆಯನ್ನು ಎದುರಿಸಿ ತನ್ನದೇ ಆದ ಸ್ಥಾನವನ್ನು ಗಟ್ಟಿಯಾಗಿ ಉಳಿಸಿಕೊಂಡು ಕನ್ನಡ ಪತ್ರಿಕೆಗಳು ನಿಂತಿವೆ.

ಮಿಡಿಯಾ ಎನ್ನುವುದು ಜಗತ್ತಿನಲ್ಲಿ ದೊಡ್ಡ ಪ್ರಮಾಣದಲ್ಲಿ ಬೆಳೆಯುತ್ತಿರುವ ಉದ್ಯಮವಾಗಿದೆ. ಇಲ್ಲಿಯೂ ಕೂಡ ಒಳ್ಳೆಯ ಭವಿಷ್ಯ ಕಟ್ಟಿಕೊಳ್ಳಲು ಸಾಕಷ್ಟು ಅವಕಾಶಗಳಿವೆ.

ತಂತ್ರಜ್ಞಾನ ಯುಗದಲ್ಲಿ ಹಲವಾರು ರೀತಿಯ ಕಾರ್ಯಚಟುವಟಿಕೆಗಳನ್ನು ಪತ್ರಿಕೋದ್ಯಮದಲ್ಲಿ ನೋಡುವುದರಿಂದ ಸಾಕಷ್ಟು ಉದ್ಯೋಗವಕಾಶಗಳನ್ನು ಪಡೆಯಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಇತಿಹಾಸ ವಿಭಾಗದ ಅತಿಥಿ ಉಪನ್ಯಾಸಕರಾದ ಚಂದ್ರಕಲಾ ಹಳ್ಳಿ ಹಾಗೂ ಗುರುರಾಜ ಬೋಮನಹಳ್ಳಿ, ವಿವಿಯ ವಿವಿಧ ವಿಭಾಗಳ ಮುಖ್ಯಸ್ಥರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಸಂಶೋಧನಾ ವಿದ್ಯಾರ್ಥಿನಿಯರು, ಸ್ನಾತಕ ಮತ್ತು ಸ್ನಾತ–ಕೋತ್ತರ ವಿದ್ಯಾರ್ಥಿನಿಯರು ಮತ್ತಿತರರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿವಿಯ ಇತಿಹಾಸ ಅಧ್ಯಯನ ವಿಭಾಗದ ಸಂಯೋಜಕ ಡಾ. ಸುರೇಶ ಕೆ.ಪಿ ಸ್ವಾಗತಿಸಿದರು. ಸಂಶೋಧನಾ ವಿದ್ಯಾರ್ಥಿನಿಯರಾದ ಸುಷ್ಮಾ ಪವಾರ ಮತ್ತು ಫಿಲೋಮಿನಾ ಅತಿಥಿಯರನ್ನು ಪರಿಚಯಿಸಿದರು. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಹಾಯಕ ಪ್ರಾಧ್ಯಾಪಕ ಸಂದೀಪ ಪ್ರಾಸ್ತಾವಿಕ ನುಡಿಗಳನ್ನಾಡಿಗಳನ್ನಾಡಿದರು.

ಇತಿಹಾಸ ವಿಭಾಗದ ಪ್ರಾಧ್ಯಾಪಕ ಡಾ. ಎಮ್.ಎಸ್. ಮುಜಾವರ ವಂದಿಸಿದರು, ಸಹಾಯಕ ಪ್ರಾಧ್ಯಾಪಕಿ ಡಾ. ತಹಮೀನ ನಿಗಾರ್ ಸುಲ್ತಾನಾ ಕಾರ್ಯಕ್ರಮವನ್ನು ನಿರೂಪಿಸಿದರು.

# ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಬೇಕು: ನ್ಯಾ.ಎಂ.ಎಲ್ ರಾಘುನಾಥ್

ಬೆಂಗಳೂರು:–

ಮಾದಕ ವಸ್ತುಗಳ ಸೇವನೆಯಿಂದ ವಿದ್ಯಾರ್ಥಿಗಳು ದೈಹಿಕ ಮತ್ತು ಮಾನಸಿಕವಾಗಿ ಬಳಲುತ್ತಿದ್ದಾರೆ. ಅಂತಹ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸುಬೇಕು, ಆಗ ಮಾತ್ರ ಸಮಾಜ ಉನ್ನತಿಯತ್ತ ಸಾಗಲು ಸಾಧ್ಯ ಎಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಗೌರವಾನ್ವಿತ ಜಿಲ್ಲಾ ಸತ್ರ ನ್ಯಾಯಾಧೀಶರಾದ ಎಂ.ಎಲ್. ರಘುನಾಥ್ ಅವರು ವಿದ್ಯಾರ್ಥಿಗಳಿಗೆ ಅಭಿಪ್ರಾಯ ಪಟ್ಟರು.

ಇಂದು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು., ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಮಾನಸಿಕ ಆರೋಗ್ಯ ವಿಭಾಗ) ಎಂ.ಇ.ಐ. ಪಾಲಿಟೆಕ್ನಿಕ್ ಕಾಲೇಜು ಎನ್.ಎಸ್.ಎಸ್ ಹಾಗೂ ರೆಡ್ ಕ್ರಾಸ್ ರಾಜಾಜಿನಗರ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ರಾಜಾಜಿನಗರದಲ್ಲಿರುವ ಎಂ ಇ ಐ ಪಾಲಿಟೆಕ್ನಿಕ್ ಕಾಲೇಜು ಸಭಾಂಗಣದಲ್ಲಿ ಆಯೋಜಿಸಲಾಗಿದ್ದ "ಅಂತರಾಷ್ಟ್ರೀಯ ಮಾದಕ ವಸ್ತುಗಳ ಹಾಗೂ ಕಳ್ಳ ಸಾಗಾಣಿ–ಕೆ ವಿರೋಧಿ ದಿನಾಚರಣೆ–2024" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕುತೂಹಲ, ಸ್ನೇಹಿತರ ಒತ್ತಾಯ, ಗೆಳೆಯರ ಗುಂಪಿನಲ್ಲಿ ಒಂದಾಗ




ಬೇಕೆಂಬ ಭಾವನೆ ಹೀಗೆ ಅನೇಕ ಕಾರಣದಿಂದ ಜನರು ಮಾದಕ ವಸ್ತುಗಳಿಗೆ ಒಳಗಾಗುತ್ತಿದ್ದಾರೆ. ಅದರಲ್ಲೂ ಹೆಚ್ಚಾಗಿ ವಿದ್ಯಾರ್ಥಿಗಳು ವ್ಯಸನಕ್ಕೆ ಒಳಗಾಗುತ್ತಿರುವುದು ವಿಷಾದಕರ ಸಂಗತಿ. ಮಾದಕ ವಸ್ತುಗಳ ಸೇವನೆ ಮಾಡಿದ ನಂತರ ತಮ್ಮ ನಿಯಂತ್ರಣ ಕಳೆದುಕೊಂಡು ಕಾನೂನು ಬಾಹಿರ ಚಟುವಟಿಕೆಗಳನ್ನು ಮಾಡುತ್ತಿದ್ದಾರೆ. ಇದನ್ನು ತಪ್ಪಿಸಲು ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವಂತ ಜಾಗೃತಿ ಜಾಥ ಹಾಗೂ ಇತರೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಲಹೆ ನೀಡಿದರು.

ಇದೇ ವೇಳೆ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋವೈದ್ಯರಾದ ಚೇತನ್ ಕುಮಾರ್ ಕೆ.ಎಸ್ ಮಾತನಾಡಿ ಮದ್ಯವು ಮಾನವನ ಮೇಲೆ ಬೀರುವಂತಹ ಪರಿಣಾಮದ ಬಗ್ಗೆ ತಿಳಿಸುವ ಜೊತೆಗೆ ಮಾದಕ ವಸ್ತು ಸೇವನೆಯಿಂದ ಮುಕ್ತಿ ಹೊಂದಲು ಇರುವಂತಹ ಟೆಲಿ ಮನಸ್ ಟೋಲ್ ಫ್ರೀ ನಂಬರ್ 14416 ರ ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮಕ್ಕೂ ಮೊದಲು ಎಂಇಐ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ "ಅಂತರಾಷ್ಟ್ರೀಯ ಮಾದಕ ವಸ್ತುಗಳ ಹಾಗೂ ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ–2024 ಜಾಥಾಕ್ಕೆ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಗೌರವಾನ್ವಿತ ಜಿಲ್ಲಾ ಸತ್ರ ನ್ಯಾಯಾಧೀಶರಾದ ಎಂ.ಎಲ್. ರಘುನಾಥ್ ಅವರು ಚಾಲನೆ ನೀಡಿದರು. ಈ ಜಾಥಾವು ಎಂಇಐ ಪಾಲಿಟೆಕ್ನಿಕ್ ಕಾಲೇಜಿನಿಂದ ಆರಂಭವಾಗಿ ಭಾಸಂ ಸರ್ಕಲ್ ವರೆಗೂ ಸಾಗಿತು. 300 ಕ್ಕೂ ಹೆಚ್ಚು ವಿದ್ಯಾರ್ಥಿಗಳು "ಸಾಕ್ಷ್ಯ ಸ್ಪಷ್ಟವಾಗಿದೆ, ತಡೆಗಟ್ಟುವಲ್ಲಿ ಹೂಡಿಕೆ ಮಾಡಿ" ಎಂಬ ಘೋಷವಾಕ್ಯ ಕೂಗುವ ಮೂಲಕ ಜಾಥಾದಲ್ಲಿ ಭಾಗವಹಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಧಿಕಾರಿಗಳಾದ ನಾಗರಾಜ್ ಎಂ.ಜಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಉಪ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಧೀಶರಾದ ಶ್ರೀಧರ್ ಎಂ. ಟಿ.ಇ.ಎಸ್ ನ ಅಧ್ಯಕ್ಷರಾದ ಎಂ.ಟಿ ನರಸಿಂಹನ್, ಎಂಇಐ ಪಾಲಿಟಕ್ನಿಕ್ ನ ಉಪನ್ಯಾಸಕರು ಹಾಗೂ ಎನ್ ಎನ್ ಎಸ್ ನ ಕಾರ್ಯಾಧಿಕಾರಿಗಳಾದ ಅಂಜನಮೂರ್ತಿ ಕೆ.ಪಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಾರ್ಯನಿರತ ಪತ್ರಕರ್ತರ ಸಂಘದ ವಾರ್ಷಿಕ ಪ್ರಶಸ್ತಿ ಪ್ರದಾನ

ಕೋಲಾರ:–

ಪ್ರತಿಭಾವಂತ ಪತ್ರಕರ್ತರು ಇಂದು ಪತ್ರಿಕಾರಂಗಕ್ಕೆ ಅಗತ್ಯವಿದ್ದು, ಪೋಷಕರು ತಮ್ಮ ಮಕ್ಕಳನ್ನು ಮೆಡಿಕಲ್, ಇಂಜಿನಿಯರಿಂಗ್‌ಗೆ ಸೀಮಿತ ಮಾಡದೇ ಪತ್ರಿಕೋದ್ಯಮ ಓದಲು ಪ್ರೇರಣೆ ನೀಡಬೇಕು ಎಂದು ವಿಜಯವಾಣಿ ಪತ್ರಿಕೆ ಪ್ರಧಾನ ಸಂಪಾದಕ ಕೆ.ಎನ್. ಚನ್ನೇಗೌಡ ಕರೆ ನೀಡಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಆಶ್ರಯದಲ್ಲಿ ನಗರದ ಪತ್ರಕರ್ತರ ಭವನದಲ್ಲಿ ಪತ್ರಿಕಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಸಾಧಕ ಪತ್ರಕರ್ತರನ್ನು ಸನ್ಮಾನಿಸಿ ಅವರು ಮಾತನಾಡಿ,ರಾಜ್ಯದಲ್ಲಿಯೇ ಅತಿ ಹೆಚ್ಚು ಪತ್ರಕರ್ತರನ್ನು ಹೊಂದಿರುವ ಕೋಲಾರ ಜಿಲ್ಲೆಯು ಅನೇಕ ಪ್ರತಿಭೆಗಳನ್ನು ಹೊರ ಹೊಮ್ಮಿದೆ. ಪತ್ರಿಕೋದ್ಯಮದಲ್ಲಿ ವರದಿಗಾರಿಕೆ ಮಾತ್ರವಲ್ಲದೆ, ಟೈಪಿಂಗ್, ಪ್ರೂಫಿಂಗ್ ,ವಿನ್ಯಾಸ, ಛಾಯ ಚಿತ್ರ, ಸಂಕಲನ, ಪ್ರಸಾರ,ಜಾಹಿರಾತು, ಮುಂತಾದ ವಿಭಾಗಗಳನ್ನು ಹೊಂದಿರುವ ಅನೇಕ




ಅವಕಾಶಗಳಿವೆ. ನಿರೀಕ್ಷಿತ ಮಟ್ಟದ ಸೇವೆ ಸಲ್ಲಿಸುವಂತ ಅಸಕ್ತಿ ಇದ್ದವರಿಗೆ ಅವಕಾಶಗಳಿವೆ. ಅವುಗಳನ್ನು ಸದ್ಬಳಿಸಿಕೊಳ್ಳುವಂತಾಗ ಬೇಕು, ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರರಾದ ಪ್ರಭಾಕರ್ ಅವರು ಸೇರಿದಂತೆ ಅನೇಕ ಸಚಿವರ ಸಲಹೆಗಾರರು ಕೋಲಾರದವರು ಅಗಿದ್ದಾರೆ ಎಂದು ನೆನಪಿಸಿದ ಅವರ ಪತ್ರಿಕೋದ್ಯಮ ಶಿಕ್ಷಣ ಪಡೆದ–ರೆ ಪತ್ರಕರ್ತರೇ ಆಗಬೇಕಿಂದಿಲ್ಲ, ಸರ್ಕಾರಿ ಉದ್ಯೋಗಗಳು ಸಿಗಲಿದೆ, ಸಚಿವರು, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿಯೂ ಕೆಲಸ ಪಡೆಯಬಹುದು ಇದ–ಕ್ಕೆ ಹಿರಿಯ ಪತ್ರಕರ್ತರಾಗಿದ್ದು, ಇದೀಗ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿರುವ ಕೆ.ವಿ.ಪ್ರಭಾಕರ್ ಸಾಕ್ಷಿಯಾಗಿದ್ದಾರೆ ಎಂದರು.

ಇತ್ತೀದಿನ ದಿನಗಳಲ್ಲಿ ಉತ್ತರ ಕನ್ನಡ,ದಕ್ಷಿಣ ಕನ್ನಡ ಜಿಲ್ಲೆಯ ಪತ್ರಕರ್ತರು ರಾಜ್ಯ ಮಾಧ್ಯಮ ವಲಯದಲ್ಲಿ ಹೆಚ್ಚು ಸಕ್ರಿಯರಾಗಿದ್ದಾ–ರೆ, ಬಯಲು ಸೀಮೆಯಿಂದಲೂ ಪ್ರತಿ ಭಾನ್ವಿತ ಪತ್ರಕರ್ತರ ಅಗತ್ಯವಿದೆ ಎಂಬುದನ್ನು ಮನಗಂಡು ಪತ್ರಿಕೋದ್ಯಮ ಶಿಕ್ಷಣ ಪಡೆಯಲು ಸಲಹೆ ನೀಡಿದರು.

ಪರಿಸ್ಥಿತಿ ಇದೇ ರೀತಿ ಮುಂದುವರೆದರೆ ಮುಂದಿನ ತಲೆಮಾರಿನಲ್ಲಿ ಯುವ ಪತ್ರಕರ್ತರನ್ನು ಹುಡುಕುವ ಪರಿಸ್ಥಿತಿ ತಲೆದೋರಲಿದೆ, ಜಿಲ್ಲಾ ಪತ್ರಕರ್ತರ ಸಂಘವೂ ಯುವ ಪತ್ರಕರ್ತರಿಗೆ ತರಬೇತಿ ಆಯೋಜಿಸಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲೆಯ ಸಾಧಕರು

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ನೀಡುವ ವಾರ್ಷಿಕ ಪ್ರಶಸ್ತಿಗೆ ಭಾಜನರಾದವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿದ್ದು, ದಿವಂಗತ ಜಿ.ನಾರಾಯಣಸ್ವಾಮಿ ನೆನಪಿನಲ್ಲಿ: ಕೋಲಾರದ ಪ್ರಿಯಪತ್ರಿಕೆ ದಿನಪತ್ರಿಕೆಯ ಸಂಪಾದಕ ಕೋ.ನಾ.ಮಂಜುನಾಥ್, ಕೆ.ಆರ್.ಕೃಷ್ಣಸ್ವಾಮಿ ನೆನಪಿನಲ್ಲಿ: ಶ್ರೀನಿವಾಸಪುರದ ವಿಜಯಧ್ವನಿ ದಿನಪತ್ರಿಕೆಯ ತಾಲೂಕು ವರದಿಗಾರ ಎನ್.ಕೃಷ್ಣಮೂರ್ತಿ, ಬಿ.ವಿ.ನರಸಿಂಹಮೂರ್ತಿ ನೆನಪಿನಲ್ಲಿ: ಕೋಲಾರದ ಕೋಲಾರ ಶಕ್ತಿ ದಿನಪತ್ರಿಕೆಯ ಸಂಪಾದಕಿ ಕೆ.ಗೋಪಿಕಾಮಲ್ಲೇಶ್, ಎಂ.ಮಲ್ಲೇಶ್ ನೆನಪಿನಲ್ಲಿ: ಬೂದಿಕೋಟೆ ಸಂಯುಕ್ತಕರ್ನಾಟಕ ದಿನಪತ್ರಿಕೆಯ ಹೋಬಳಿ ವರದಿಗಾರ ಪ್ಯಾರೇಜಾನ್, ಬಿ.ಎನ್.ಗುರುಪ್ರಸಾದ್ ನೆನಪಿನಲ್ಲಿ: ಮಾಲೂರಿನ ಈಸಂಜೆ ದಿನಪತ್ರಿಕೆಯ ತಾಲೂಕು ವರದಿಗಾರ ಎಸ್.ವಿ.ಲೋಕೇಶ್, ಹೆಚ್.ಎನ್.ಸೋಮಶೇಖರಗೌಡ ನೆನಪಿನಲ್ಲಿ: ಕೋಲಾರದ ಸುವರ್ಣ ಟಿ.ವಿ ಜಿಲ್ಲಾ ವರದಿಗಾರ ಸಿ.ದೀಪಕ್, ಬಿ.ಆರ್ಮುಗಂ ನೆನಪಿನಲ್ಲಿ: ಕೆ.ಜಿ.ಎಫ್ ಹೊಸದಿಗಂತ ದಿನಪತ್ರಿಕೆಯ ತಾಲೂಕು ವರದಿಗಾರ ಸಿ.ಎ.ಮುರಳೀಧರರಾವ್, ಸಿ.ಎಂ.ರಂಗಾರೆಡ್ಡಿ ನೆನಪಿನಲ್ಲಿ: ಮುಳಬಾಗಿಲಿನ ಕನ್ನಡಮಿತ್ರ ದಿನಪತ್ರಿಕೆಯ ತಾಲೂಕು ವರದಿಗಾರ ಪಿ.ಎಲ್.ಅಮೃತಯ್ಯ, ವಿ.ಎಂ.ನಾಗಪ್ಪ ಅವರ ನೆನಪಿನಲ್ಲಿ: ಕೋಲಾರದ ಪ್ರಜಾ ಟಿ.ವಿ ಕೆಮರಾಮೆನ್ ಸಿ.ಎನ್.ಪವನ್‌ಕುಮಾರ್‌ರನ್ನು ಸನ್ಮಾನಿಸಲಾಯಿತು.

ಜಿಲ್ಲೆಯ ಎಸ್ಸೆಸ್ಸೆಲ್ಸಿ,ದ್ವಿತೀಯ ಪಿಯುಸಿ,ಪದವಿಯಲ್ಲಿ ಉತ್ತಮ ಸಾಧನೆ ಮಾಡಿದ 32 ಮಂದಿ ಪತ್ರಕರ್ತರ ಮಕ್ಕಳಿಗೆ ನಗದು ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬೆಂಗಳೂರು ವಿವಿ ಕುಲಪತಿ ಪ್ರೊ.ನಿರಂಜನ ವಾನಳ್ಳಿ ಪ್ರಧಾನ ಉಪನ್ಯಾಸ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ರಾಜ್ಯಸಂಘದ ಖಜಾಂಚಿ ವಾಸು ದೇವಹೊಳ್ಳ, ಕಾರ್ಯಕಾರಿ ಸದಸ್ಯರಾದ ಮುನಿರಾಜು, ಕೆ.ಎಸ್.ಗಣೇಶ್,ಮಹಮದ್ ಯೂನಸ್ ಸೇರಿದಂತೆ ಜಿಲ್ಲೆಯ ಪತ್ರಕರ್ತರು, ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು.

Printed by: SUCHITHRA PRINTER's & PUBLISHER's,#378/379, MAYAGAPPA COMPLEX'' 1st Stage 6th phase Industrial Town West of Chord Road Rajajinagar Bengaluru 560044,karnataka.
Publised by: S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.
Owned by: S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.
Printed At :SUCHITHRA PRINTER's & PUBLISHER's,#378/379, MAYAGAPPA COMPLEX'' 1st Stage 6th phase Industrial Town West of Chord Road Rajajinagar Bengaluru 560044,karnataka.
Editor :S.K.Wadeyar,#378/379, "MAYAGAPPA COMPLEX" 1st Stage 6th phase Industrial Town West of Chord Road Rajajinagar Bengaluru-560044,karnataka.